ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ...

RNI No: KARKAN/2014/54928

ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI

Postal Registration N.o KA/BGW--1862/2024-26

KANNADA DAILY PAPER

ಕನ್ನಡ ದಿನಪತ್ರಿಕೆ

ಸಂಪುಟ: 11
Vol:11
ಸಂಚಿಕೆ: 142
Issuse:142
ದಿನಾಂಕ:08–07–2024
Date:08-07-2024
ಸೋಮವಾರ Monday
ಪುಟ:4 Page:4
ರೂ.: 3–00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080–31212322 ಮೊ.: 9902543494 E-mail:sahayavany@gmail.com

# ಹತ್ಯೆ ತನಿಖೆ ಚುರುಕು

ಬೆಂಗಳೂರು:–

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ನಡೆದ ಸ್ಥಳ ಹಾಗೂ ಶವ ಸಾಗಿಸಿದ ವಾಹನ ಇನ್ನಿತರೆ ಕಡೆಗಳಿಂದ ಸಂಗ್ರಹಿಸಲಾಗಿದ್ದ ಬೆರಳಚ್ಚುಗಳಲ್ಲಿ ಬಂಧಿತ ಆರೋಪಿಗಳ ಪೈಕಿ 10ಕ್ಕೂ ಹೆಚ್ಚು ಆರೋಪಿಗಳ ಬೆರಳಚ್ಚುಗಳು ಹೊಂದಾಣಿಕೆಯಾಗಿವೆ.ಬೆರಳಚ್ಚುಗಳು ಹೊಂದಾಣಿಕೆಯಾಗಿರುವ ಆರೋಪಿಗಳ ಪಟ್ಟಿಯಲ್ಲಿ ನಟ ದರ್ಶನ್ ಹಾಗೂ ಪವಿತ್ರಾ ಗೌಡ ಸೇರಿದ್ದಾರೆ.ಕೊಲೆ ನಡೆದ ಸ್ಥಳದಲ್ಲಿ ಸಂಗ್ರಹಿಸಲಾಗಿದ್ದ ಬೆರಳಚ್ಚು ಮಾದರಿಗಳಿಗೆ ಇವರ ಫಿಂಗರ್ ಪ್ರಿಂಟ್‌ಗಳು ಹೊಂದಾಣಿಕೆಯಾಗಿವೆ. ಹಲ್ಲೆ ಮಾಡಿದ ಜಾಗಗಳು, ಕೊಲೆ ನಡೆದ ಸ್ಥಳ, ಶವ ಸಾಗಿಸಿದ್ದ ವಾಹನ, ಶವ ಬಿಸಾಡಿದ್ದ ಜಾಗ, ಶವ ಸಾಗಾಟ ಮಾಡಿದ ವಾಹನ, ಶವ ಇಟ್ಟಿದ್ದ ಸೆಕ್ಯೂರಿಟಿ ಗಾರ್ಡ್ ಕೊಠಡಿ, ಮೃತನ ಬಟ್ಟೆಗಳು, ಹಲ್ಲೆ ಮಾಡಲು ಬಳಸಿದ ವಸ್ತುಗಳು, ಸಾಗಾಟ ಮಾಡಿದ ಕಾರ್, ಆರೋಪಿಗಳ ಬಟ್ಟೆಗಳ ಮೇಲಿನ ಬೆರಳಚ್ಚು ಸಂಗ್ರಹ ಮಾಡಲಾಗಿತ್ತು. ರೇಣುಕಾ ಸ್ವಾಮಿಯನ್ನು ಚಿತ್ರದುರ್ಗದಿಂದ ಕರೆತರಲಾಗಿದ್ದ ವಾಹನ, ಆರೋಪಿಗಳ ಮನೆಗಳು ಇನ್ನಿತರೆ ಕಡೆಗಳಲ್ಲಿನ ಬೆರಳಚ್ಚುಗಳನ್ನು ತಜ್ಞರ ತಂಡ ಸಂಗ್ರಹಿಸಿತ್ತು. ಆ ಮಾದರಿಗಳನ್ನು ಆರೋಪಿಗಳ ಬೆರಳಚ್ಚು ಮಾದರಿಗಳೊಟ್ಟಿಗೆ ಸೇರಿಸಿ ಬೆಂಗಳೂರು ಮತ್ತು ಹೈದರಾಬಾದ್ ಎಫ್‌ಎಸ್‌ಎಲ್ ಕೇಂದ್ರಗಳಿಗೆ ಕಳಿಸಲಾಗಿತ್ತು. ಎರಡೂ ಕೇಂದ್ರದಿಂದ ವರದಿ ಬಂದಿದ್ದು, ಎರಡೂ ವರದಿಗಳು ಬಹುತೇಕ ಒಂದೇ ರೀತಿಯಲ್ಲಿದ್ದು, ಹತ್ತಕ್ಕೂ ಹೆಚ್ಚು ಆರೋಪಿಗಳ ಬೆರಳಚ್ಚುಗಳು, ಅಪರಾಧ ನಡೆದ ಸ್ಥಳದಲ್ಲಿ ಸಂಗ್ರಹಿಸಿದ ಬೆರಳಚ್ಚು ಮಾದರಿಗೆ ಹೊಂದಾಣಿಕೆಯಾಗಿವೆ.



**ಡಿಎನ್‌ಎ ಮಾದರಿ:**

ಕೊಲೆ ನಡೆದ ಸ್ಥಳ ಹಾಗೂ ಶವ ಸಾಗಿಸಿದ ಜಾಗಗಳಿಂದ ಜೈವಿಕ ಸಾಕ್ಷಿಗಳಾದ ರಕ್ತದ ಕಲೆ, ಹೇರ್ ಸ್ಯಾಂಪಲ್ ಡಿಎನ್‌ಎ ಮಾದರಿಗಳನ್ನು ಸಹ ಸಂಗ್ರಹಿಸಲಾಗಿದೆ. ಆರೋಪಿಗಳ ಕೂದಲು ಇನ್ನಿತರೆ ಮಾದರಿಗಳನ್ನು ಸಹ ಸಂಗ್ರಹಿಸಿ ತಪಾಸಣೆಗೆ ಕಳಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸದಂತೆ ಹಲವು ಜೈವಿಕ ಹಾಗೂ ಭೌತಿಕ ಸಾಕ್ಷ್ಯ ಹಾಗೂ ಮಾದರಿಗಳನ್ನು ಪೊಲೀಸರು ಸಂಗ್ರಹಿಸಿ ಅವುಗಳ ಎಫ್‌ಎಸ್‌ಎಲ್ ವರದಿಗೆ ರವಾನಿಸಿದ್ದಾರೆ. ಕೆಲವು ವರದಿಗಳು ಈಗಾಗಲೇ ಬಂದಿದ್ದರೆ ಕೆಲವು ವರದಿಗಳು ಇನ್ನಷ್ಟೆ ಬರಬೇಕಿದೆ. ಡಿಜಿಟಲ್ ಸಾಕ್ಷ್ಯ ಪತ್ತೆ ಮಾಡಲು ಸಹ ಪೊಲೀಸರು ಹಲವು ಪ್ರಯತ್ನ ಮಾಡುತ್ತಿದ್ದು ಆರೋಪಿಗಳ ಮೊಬೈಲ್, ಲ್ಯಾಪ್‌ಟಾಪ್ ಹಾಗೂ ಸಿಸಿಟಿವಿ ಡಿವಿಆರ್‌ಗಳನ್ನು ಹೈದರಾಬಾದ್ ಎಫ್‌ಎಸ್‌ಎಲ್‌ಗೆ ರವಾನಿಸಿದ್ದಾರೆ. ಆರೋಪಿಗಳು, ಕೊಲೆ ಪ್ರಕರಣದ ಬಳಿಕ ಮೊಬೈಲ್ ನಲ್ಲಿನ ಎಲ್ಲ ಡಾಟಾ ವನ್ನು ಎಲ್ಲ ಮಾಹಿತಿಯನ್ನು ಅಳಿಸಿ ಹಾಕಿದ್ದರು. ಹಾಗಾಗಿ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿ ಮೊಬೈಲ್ ಡಾಟಾ ರಿಟ್ರೀವ್ ಮಾಡಲಾಗುತ್ತಿದೆ.

**ಒಂದೊಂದು ರೀತಿ ಭಾಗಿ:**

ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ 17 ಮಂದಿ ಆರೋಪಿಗಳಿದ್ದಾರೆ. ಪೊಲೀಸರು ಹೇಳಿರುವಂತೆ ಒಬ್ಬೊಬ್ಬರು ಒಂದೊಂದು ರೀತಿ ಕೊಲೆ ಹಾಗೂ ಅಪಹರಣದಲ್ಲಿ –3ನೇ ಪುಟಕ್ಕೆ

## ಜು3ನೇ ವಾರ ನೀಟ್ ಕೌನ್ಸಿಲಿಂಗ್

ನವದೆಹಲಿ:–

ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್–ಯುಜಿ ಕೌನ್ಸೆಲಿಂಗ್ ಈ ತಿಂಗಳ ಮೂರನೇ ವಾರದ ನಂತರ ದೇಶಾದ್ಯಂತ ಆರಂಭವಾಗುವ ಸಾಧ್ಯತೆ ಇದೆ.ನೀಟ್–ಯುಜಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಮಂದಿಗೆ ದೇಶಾದ್ಯಂತ ಎಂಬಿಬಿಎಸ್ ಪ್ರವೇಶಕ್ಕೆ ಕಾಲೇಜು ಆಯ್ಕೆಗೆ ಕೌನ್ಸಲಿಂಗ್ ನಡೆಯಲಿದೆ. ವಿದ್ಯಾರ್ಥಿಗಳು ಪಡೆದ ರಾಂಕ್ ಆಧಾರದ ಮೇಲೆ ಸರ್ಕಾರಿ ಮತ್ತು ಖಾಸಗಿ ಕಾಲೇಜಿನಲ್ಲಿ ಸೀಟು ಹಂಚಿಕೆ ಪ್ರಕ್ರಿಯೆ ನಡೆಯಲಿದೆ.ನಿನ್ನೆಯಿಂದ ಆರಂಭವಾಗಬೇಕಿದ್ದ ಕೌನ್ಸೆಲಿಂಗ್ ಪ್ರಕ್ರಿಯೆಯನ್ನು ಸರ್ಕಾರ ಮುಂದೂಡಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಲಾಗಿದೆ. ಕೌನ್ಸಲಿಂಗ್‌ಗೆ ಇನ್ನೂ ಸಮಯ ನಿಗಧಿ ಮಾಡಿಲ್ಲ. ಹೀಗಾಗಿ ಮುಂದೂಡುವ ಪ್ರಶ್ನೆಯ ಎದುರಾಗುವುದಿಲ್ಲ ಎಂದು ತಿಳಿಸಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಪ್ರತಿಪಕ್ಷಗಳು ಈ ವಿಷಯದ ಬಗ್ಗೆ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಂತೆ, ಕಳೆದ ವರ್ಷವೂ ಜುಲೈ 20 ರಂದು ನೀಟ್– ಯುಜಿ ಕೌನ್ಸೆಲಿಂಗ್ ಪ್ರಾರಂಭವಾಗಿತ್ತು. ಈ ಬಾರಿಯೂ ಅದೇ ಸಮಯಕ್ಕೆ ಆರಂಭವಾಗಹುದು ಎಂದು ಕೇಂದ್ರ ಸರ್ಕಾರ ಹೇಳಿದೆ."ಎನ್‌ಇಇಟಿ–ಯುಜಿ ಮತ್ತು ಪಿಜಿಯ ಕೌನ್ಸೆಲಿಂಗ್ ವೇಳಾಪಟ್ಟಿಯನ್ನು ವೈದ್ಯಕೀಯ ಕೌನ್ಸೆಲಿಂಗ್




ಸಮಿತಿಯು ತನ್ನ ವೆಬ್‌ಸೈಟ್‌ನಲ್ಲಿ ಪರೀ–ಕ್ಷೆಯ ಪ್ರಕ್ರಿಯೆ ಪೂರ್ಣಗೊಳಿಸಿದ ಮತ್ತು ರಾಷ್ಟ್ರೀಯ ವೈದ್ಯಕೀಯ ಆಯೋಗದಿಂದ ಸೀಟ್ ಮ್ಯಾಟ್ರಿಕ್ಸ್‌ನ ಅಂತಿಮಗೊಳಿಸುವಿಕೆಯ ಆಧಾರದ ಮೇಲೆ ಪ್ರಕಟಿಸಿದೆ.2024 ರ ವರ್ಷಕ್ಕೆ, ಜೂನ್ ಕೊನೆಯ ವಾರದಲ್ಲಿ ಯುಜಿ ಮತ್ತು ಪಿಜಿ ಸೀಟ್‌ಗಳಿಗೆ ಸೀಟ್ ಮ್ಯಾಟ್ರಿಕ್ಸ್‌ನ ಅಂತಿಮಗೊಳಿಸುವ ವೇಳಾಪಟ್ಟಿಯನ್ನು ರಾಷ್ಟ್ರೀಯ ವೈದ್ಯಕೀಯ ಆಯೋಗ ಜುಲೈ ಮೂರನೇ ವಾರದಲ್ಲಿ ಯುಜಿ ಸೀಟ್ ಮ್ಯಾಟ್ರಿಕ್ಸ್ ಮತ್ತು ಆಗಸ್ಟ್ ಮಧ್ಯದ ವೇಳೆಗೆ ಪಿಜಿ ಸೀಟ್ ಮ್ಯಾಟ್ರಿಕ್ಸ್ ಅನ್ನು ಅಂತಿಮಗೊಳಿಸಲಿದೆ ಎಂದು ಹೇಳಲಾಗಿದೆ.ನೀಟ್ ಸೀಟು ಹಂಚಿಕೆಯ ಮ್ಯಾಟ್ರಿಕ್ಸ್ ವಿದ್ಯಾರ್ಥಿಗಳಿಗೆ ರಾಜ್ಯವಾರು ಸೀಟುಗಳ ವಿತರಣೆ, ಕಟ್‌ಆಫ್ ಅಂಕಗಳು ಮತ್ತು ಪ್ರತಿ ವೈದ್ಯಕೀಯ ಸಂಸ್ಥೆಯು ಒದಗಿಸುವ ಕೋರ್ಸ್‌ಗಳ ಬಗ್ಗೆ ಮಾಹಿತಿಯನ್ನು ಒದಗಿಸುತ್ತದೆ ಎಂದು ಮಾಹಿತಿ ನೀಡಿದೆ.

## ಅಸ್ಸಾಂ –ಮಳೆ, ಸಾವಿನ ಸಂಖ್ಯೆ 48ಕ್ಕೇರಿಕೆ



ಗುವಹಟಿ:–

ಅಸ್ಸಾಂನಲ್ಲಿ ಸುರಿದ ಬಾರಿ ಮಳೆ ಮತ್ತು ಪ್ರವಾಹದಿಂದ ಕಳೆದ 24 ಗಂಟೆಗಳಲ್ಲಿ ಆರು ಮಂದಿ ಮೃತಪಟ್ಟಿದ್ದು ಮೃತಪಟ್ಟವರ ಸಂಖ್ಯೆ 58ಕ್ಕೆ ಏರಿಕೆಯಾಗಿದೆ.ಬಾರಿ ಮಳೆ ಮತ್ತು ಪ್ರವಾಹದಿಂದ 23 ಲಕ್ಷಕ್ಕೂ ಹೆಚ್ಚು ಜನರು ತೊಂದ–ರೆಗೆ ಸಿಲುಕಿದ್ದು ಎಲ್ಲೆಲ್ಲಿಯೂ ಜಲಾವೃತವಾಗಿದ್ದು ಜನರ ಬದುಕು ಮೂರಾಬಟ್ಟೆಯಾಗಿದೆ.ಗುವಾಹಟಿ, ಅನಿಲ್ ನಗರ, ನಬಿನ್ ನಗರ, ಮತ್ತು ರುಕ್ಮಿಣಿಗಾಂವ್‌ನಲ್ಲಿ ನಾಲ್ಕನೇ ದಿನವೂ ಜಲಾವೃತವಾಗಿದ್ದು, ಹಲವಾರು ಸ್ಥಳಗಳಲ್ಲಿ ಬ್ರಹ್ಮಪುತ್ರ ಅಪಾಯದ ಮಟ್ಟಕ್ಕಿಂತ ಹೆಚ್ಚಾಗಿ ಹರಿಯುತ್ತಿದೆ. ಈ ವರ್ಷ ಇದುವರೆಗೆ ಅಸ್ಸಾಂನಲ್ಲಿ ಪ್ರವಾಹದಿಂದಾಗಿ 58 ಜನರು ಸಾವನ್ನಪ್ಪಿದ್ದಾರೆ.

ಮಳೆ ಮತ್ತು ಪ್ರವಾಹದಿಂದ ಸಮಸ್ಯೆಗ ಸಿಲುಕಿದ ಮಂದಿಯ ರಕ್ಷಣಾ ಕಾರ್ಯ ಭರದಿಂದ ಸಾಗಿದೆ. ಖುದ್ದು ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ಅವರು ಕಾರ್ಯಾಚರಣೆಯ ಉಸ್ತುವಾರಿ ವಹಿಸಿದ್ದಾರೆ. –3ನೇ ಪುಟಕ್ಕೆ

## 7 ಸಾವಿರ ಡೆಂಗ್ಯು ಸೋಂಕು ಪತ್ತೆ ರಾಜ್ಯದಲ್ಲಿ ಡೆಂಗ್ಯು ಉಲ್ಬಣ, ಸೋಂಕು ಆತಂಕ

ಬೆಂಗಳೂರು:–

ರಾಜ್ಯದಲ್ಲಿ ಡೆಂಗ್ಯೂ ಪ್ರಕರಣ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು ಇದುವರೆಗೂ 7 ಸಾವಿರಕ್ಕೂ ಅಧಿಕ ಪ್ರಕರಣಗಳು ಪತ್ತೆಯಾಗಿರುವುದು ರಾಜ್ಯ ಸರ್ಕಾರದ ನಿದ್ದೆಗೆಡಿಸಿದೆ. ಇದರ ನಡುವೆ ಝೀಕಾ ಸೋಂಕಿನಿಂದ ಶಿವಮೊಗ್ಗದಲ್ಲಿ ರಾಜ್ಯದಲ್ಲಿ ಮೊದಲ ಸಾವು ಸಂಭವಿಸಿದ್ದು ಮತ್ತಷ್ಟು ಆತಂತಕ್ಕೆ ಕಾರಣವಾಗಿದೆ.ರಾಜ್ಯದಲ್ಲಿ ಡೆಂಗ್ಯೂ ಅಬ್ಬರ ಜೋರಾಗಿರುವಾಗಲೇ ಝೀಕಾ ವೈರಸ್ ಆರ್ಭಟ ಶುರುವಾಗಿದೆ. ಶಿವಮೊಗ್ಗದ ಗಾಂಧಿನಗರದಲ್ಲಿ 74 ವರ್ಷದ ವೃದ್ಧ ಝೀಕಾ ವೈರಸ್‌ಗೆ ಮೊದಲ ಬಲಿಯಾಗಿದ್ದಾರೆ. ಡೆಂಗ್ಯೂ ಸೋಂಕು ಹೆಚ್ಚಾಗುತ್ತಿದ್ದು ಇದರ ನಡುವೆಯೇ ಝೀಕಾ ಸೋಂಕು ಆತಂಕ ಹೆಚ್ಚಾಗಿದೆ.ಡೆಂಗ್ಯೂ ರೋಗದಿಂದ ಅಂಜನಾಪುರದ 11 ವರ್ಷದ ಬಾಲಕ ಗಗನ್ ಸಾವನ್ನಪ್ಪಿದ್ದ ಬೆನ್ನಲ್ಲೇ ಇದೀಗ ಝೀಕಾ ಸೋಂಕಿನಿಂದ 74 ವರ್ಷದ ವ್ಯಕ್ತಿ ಸಾವನ್ನಪ್ಪಿರುವುದು ಮತ್ತಷ್ಟು ಆತಂಕ ಸೃಷ್ಟಿಯಾಗುವಂತೆ ಮಾಡಿದೆ.ಕಳೆದ 24 ಗಂಟೆಯಲ್ಲಿ ರಾಜ್ಯದಲ್ಲಿ 175 ಜನರಲ್ಲಿ ಡೆ–ಂಗ್ಯೂ ಪ್ರಕರಣ ವರದಿಯಾಗಿದ್ದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 1908 ಹೊಸ ಪ್ರಕರಣ




ಧೃಡಪಟ್ಟಿದೆ. 127 ಸೋಂಕಿತರು ಬಿಬಿಎಂಪಿ ವ್ಯಾಪ್ತಿಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಹೇಳಲಾಗಿದೆ.ರಾಜ್ಯದಲ್ಲಿ ಒಂದೇ ದಿನ 175 ಜನರಿಗೆ ಡೆಂಗ್ಯೂ ಸೋಂಕು ತಗುಲಿರುವುದು ದೃಢಪಟ್ಟಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 115 ಜನರಿಗೆ ಡೆಂಗ್ಯೂ ದೃಢಪಟ್ಟಿದೆ. ಡೆಂಗ್ಯೂ ಸೋಂಕಿತ 352 ಜನರಿಗೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. 127 ಸೋಂಕಿತರು ಬಿಬಿಎಂಪಿ ವ್ಯಾಪ್ತಿಯಲ್ಲಿ ಚಿಕಿತ್ಸೆ ಪಡೆ–ಯುತ್ತಿದ್ದು ರಾಜ್ಯದಲ್ಲಿ ಇದುವರೆಗೆ 7 ಸಾವಿರ ಜನರಿಗೆ ಡೆಂಗ್ಯೂ ಸೋಂಕು ತಗುಲಿದೆ ಎಂದು ಅಂಕಿ ಅಂಶಗಳು ಮಾಹಿತಿ ನೀಡಿವೆ.

**ಮುಂದುವರಿದ ಡೆಂಗ್ಯೂ ಅಬ್ಬರ:**

ರಾಜ್ಯದಲ್ಲಿ ಡೆಂಗ್ಯೂ ದಂಡಯಾತ್ರೆ ಮುಂದುವರಿದಿದೆ. 7 ಸಾವಿರಕ್ಕೂ ಅಧಿಕ ಪ್ರಕರಣ ಪತ್ತೆಯಾಗಿವೆ. ಕಳೆದ 24 ಗಂಟೆಯಲ್ಲಿ ರಾಜ್ಯದಲ್ಲಿ 175 ಜನರಲ್ಲಿ ಡೆಂಗ್ಯೂ ಪ್ರಕರಣ –3ನೇ ಪುಟಕ್ಕೆ

## ಭಾರಿ ಮಳೆ ನಿರೀಕ್ಷೆ–ರೆಡ್ ಅಲರ್ಟ್ ಘೋಷಣೆ



ಬೆಂಗಳೂರು:–

ಅರಬ್ಬೀ ಸಮುದ್ರದಲ್ಲಿನ ವೈಪರೀತ್ಯಗಳು ಏರುಪೇರಾಗುತ್ತಲೇ ಇವೆ. ಇದರಿಂದಾಗಿ ಮುಂಗಾರು ಮಳೆ ಮುಂದುವರಿದಿದೆ. ಮತ್ತೆ ಭಾರೀ ಮಳೆಯಾಗುವ ನಿರೀಕ್ಷೆಯಿರುವ ವಿವಿಧ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.ಕರ್ನಾಟಕದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದೆ. –3ನೇ ಪುಟಕ್ಕೆ

## ಮಳಿಗೆ ಕುಸಿದ ಕಟ್ಟಡ, 7 ಸಾವು



ಅಹಮದಾಬಾದ್:–

ಗುಜರಾತ್‌ನ ಸೂರತ್‌ನಲ್ಲಿ ಸುರಿದ ಬಾರಿ ಮಳೆಯ ಪರಿಣಾಮ ಕಟ್ಟಡ ಕುಸಿದು 7 ಮಂದಿ ಸಾವನ್ನಪ್ಪಿದ್ದು ರಕ್ಷಣಾ ಸಿಬ್ಬಂಧಿಯ ಪರಿಶ್ರಮದಿಂದ ಎಲ್ಲಾ 7 ಶವಗಳನ್ನು ಹೊರತೆಗೆಯಲಾಗಿದ್ದು, 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ನಡೆದಿದೆ.ಸತತ ಮಳೆಯ ನಡುವೆ ಸೂರತ್‌ನಲ್ಲಿ ಆರು ಅಂತಸ್ತಿನ ಕಟ್ಟಡ ಕುಸಿದು ಒಂದು ದಿನದ ನಂತರ ಏಳು ಮೃತದೇಹಗಳನ್ನು ಅವಶೇಷಗಳಿಂದ ಹೊರತೆಗೆಯಲಾಗಿದೆ. ರಕ್ಷಣಾ ಕಾರ್ಯ ಮುಕ್ತಾಯವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಸಚಿನ್ ಪಾಲಿ ಗ್ರಾಮದಲ್ಲಿ 30 –3ನೇ ಪುಟಕ್ಕೆ

## ಉಪ ಲೋಕಾಯುಕ್ತರಿಗೆ ಪ್ರಮಾಣ ವಚನ ಬೋಧಿಸಿದ ರಾಜ್ಯಪಾಲರು

ಬೆಂಗಳೂರು:–

ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ರಾಜಭವನದಲ್ಲಿ ಆಯೋಜಿಸಲಾಗಿದ್ದ ಸರಳ ಸಮಾರಂಭದಲ್ಲಿ ಕರ್ನಾಟಕ ಲೋಕಾಯುಕ್ತದ ಉಪ ಲೋಕಾಯುಕ್ತರಿಗೆ ಪದ ವಿಯ ಅಧಿಕಾರ ಪ್ರಮಾಣವಚನವನ್ನು ಬೋಧಿಸಿದರು. ಗೌರವಾನ್ವಿತ ನ್ಯಾಯಾ ಮೂರ್ತಿ ಬಿ.ವೀರಪ್ಪ ಅವರು ಉಪಲೋ ಕಾಯುಕ್ತರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾ ಮಯ್ಯ, ಗೌರವಾನ್ವಿತ ನ್ಯಾಯಾ ಮೂರ್ತಿ ಲೋಕಾಯುಕ್ತ ಬಿ



ಎಸ್ ಪಾಟೀಲ್, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

# ಹತ್ಯೆ ತನಿಖೆ ಚುರುಕು

ಭಾಗೀದಾರರಾಗಿದ್ದಾರೆ. ಆದರೆ ಈ ಪ್ರಕರಣದಲ್ಲಿ ಮೊದಲು ಬಂಧಿತರಾದ ಆರೋಪಿಗಳೇ ಈಗ ಸಾಕ್ಷಿಗಳಾಗಿದ್ದು, ಪ್ರಕರಣಕ್ಕೆ ಮಹತ್ವದ ತಿರುವು ನೀಡಿದ್ದಾರೆ. ದರ್ಶನ್ ಮತ್ತು ಗ್ಯಾಂಗ್ ಯಾರನ್ನು ಸಾಕ್ಷ್ಯ ನಾಶ ಮಾಡಲೆಂದು ಕರೆಸಿದ್ದರೋ ಅವರೇ ಈಗ ಸಾಕ್ಷಿಗಳಾಗಿದ್ದಾರೆ. ರೇಣುಕಾ ಸ್ವಾಮಿ ಶವಕ್ಕೆ ಮುಕ್ತಿ ನೀಡಲು ಮುಂದಾಗಿದ್ದವರೇ ಈಗ ಪ್ರಕರಣಕ್ಕೆ ಮುಕ್ತಿ ನೀಡುವ ಪ್ರಮುಖ ಸಾಕ್ಷಿಗಳಾಗಿ ಬದಲಾಗಿದ್ದಾರೆ.

**ಮೂವರು ನಿಗಧಿ:**

ಪಟ್ಟಣಗೆರೆ ಶೆಡ್?ನಲ್ಲಿ ರೇಣುಕಾ ಸ್ವಾಮಿಯ ಕೊಲೆಯಾದ ಬಳಿಕ ಶವವನ್ನು ಎಸೆಯಲು ಮೂವರನ್ನು ನಿಗದಿಪಡಿಸಲಾಗಿತ್ತು.ತಲಾ 5 ಲಕ್ಷ ರೂ ಅವರಿಗೆ ನೀಡಿ ಶವವನ್ನು ಸಾಗಿಸಿ ದೂರ ಎಸೆಯುವುದು ಮಾತ್ರವೇ ಅಲ್ಲದೆ ಒಂದೊಮ್ಮೆ ಪೊಲೀಸರಿಗೆ ಶವ ದೊರೆತರೆ ತಾವೇ ಹೋಗಿ ಕೊಲೆ ಮಾಡಿರುವುದಾಗಿ ಒಪ್ಪಿಕೊಳ್ಳಬೇಕು ಎಂದು ನಿಗದಿಯಾಗಿತ್ತು.ಅದರಂತೆ ತಲಾ 5 ಲಕ್ಷ ರೂ ಹಣ ಪಡೆದು ವಿ ಪ್ರಕಾಶ್, ನಿಖಿಲ್ ನಾಯಕ್, ಕಾರ್ತಿಕ್ ಅಲಿಯಾಸ್ ಕಪ್ಪೆ ಅವರುಗಳು ರೇಣುಕಾ ಸ್ವಾಮಿ ಶವವನ್ನು ಸಾಗಿಸಿ, ಕಾಲುವೆಗೆ ಎಸೆದಿದ್ದರು. ಶವ ಪೊಲೀಸರಿಗೆ ದೊರೆತ ಬಳಿಕ ಪೊಲೀಸರ ಎದುರು ತಾವೇ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದರು.

**ಆರೋಪಿಗಳೇ ಸಾಕ್ಷಿ:**

ಪ್ರಕರಣದಲ್ಲಿ ಈ ಮೂವರು ಆರೋಪಿಗಳೇ ಸಾಕ್ಷ್ಯಗಳಾಗಿದ್ದು, ಸಿಆರ್‌ಪಿಸಿ 164 ಅಡಿಯಲ್ಲಿ ಸಾಕ್ಷ್ಯಗಳ ಹೇಳಿಕೆಯನ್ನು ಪೊಲೀಸರು ದಾಖಲಿಸಿಕೊಂಡಿದ್ದಾರೆ. ಅಲ್ಲದೆ ನ್ಯಾಯಾಧೀಶರ ಮುಂದೆ ಸಹ ಹೇಳಿಕೆಯನ್ನು ದಾಖಲು ಮಾಡಿದ್ದಾರೆ. ಮಾತ್ರವಲ್ಲದೆ ಈ ಮೂವರಿಗೆ ಸಂಬಂಧಿಸಿದಂತೆ ಇತರೆ ಕೆಲವು ಸಾಕ್ಷ್ಯಗಳನ್ನು ಸಹ ಪೊಲೀಸರು ಕಲೆ ಹಾಕಿದ್ದಾರೆ.ಶವ ಎಸೆಯಲು ತೆರಳಿದ ವಾಹನ, ಅದರ ಸಿಸಿಟಿವಿ ದೃಶ್ಯಾವಳಿಗಳು, ಶವ ಎಸೆದ ಬಳಿಕ ಆಟೋದಲ್ಲಿ ಪ್ರಯಾಣ ಮಾಡಿದ್ದು, ಆ ಆಟೋ ಚಾಲಕನನ್ನು ಪತ್ತೆ ಮಾಡಲಾಗಿದ್ದು, ಆತನ ವಿಚಾರಣೆಯನ್ನೂ ಮಾಡಲಾಗಿದೆ. ಹಾಗೂ ಆತನಿಂದ ಆರೋಪಿಗಳ ಗುರುತು ಪತ್ತೆ ಪೆರೆಡ್ ಸಹ ಮಾಡಿಸಲಾಗಿದೆ.

**ಮಾಹಿತಿ ಸಂಗ್ರಹ:**

ಬಳಿಕ ಆರೋಪಿಗಳು ದರ್ಶನ್ ಮತ್ತು ಗ್ಯಾಂಗ್‌ನಿಂದ ಪಡೆದಿರುವ ಹಣವನ್ನು ವಶಕ್ಕೆ ಪಡೆಯಲಾಗಿದೆ. ಶವ ಎಸೆದ ಬಳಿಕ ಕಾರ್ತಿಕ್ ಅಲಿಯಾಸ್ ಕಪ್ಪೆ ಹಾಗೂ ನಿಖಿಲ್ ನಾಯಕ್ ಆಟೋ ಹತ್ತಿ ನಾಯಂಡಹಳ್ಳಿವರೆಗೂ ಹೋಗಿದ್ದರು ಅದೆಲ್ಲದರ ಮಾಹಿತಿಯನ್ನು ಪೊಲೀಸರು ಸಂಗ್ರಹಿಸಿದ್ದಾರೆ. ಇದೀಗ ಪ್ರಕರಣದ 14 ಆರೋಪಿಗಳನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಇರಿಸಲಾಗಿದೆ. ಆದರೆ ಪ್ರಕರಣದಲ್ಲಿ ಸಾಕ್ಷಿಗಳಾಗಿರುವ ನಿಖಿಲ್ ನಾಯಕ್, ಕಾರ್ತಿಕ್ ಮತ್ತು ಪ್ರಕಾಶ್ ಅವರುಗಳನ್ನು ಮಾತ್ರ ತುಮಕೂರು ಜೈಲಿನಲ್ಲಿ ಇರಿಸಲಾಗಿದೆ. ಇತರೆ ಆರೋಪಿಗಳು ಇವರ ಮೇಲೆ ಪ್ರಭಾವ ಬೀರಬಹುದು ಎಂಬ ಕಾರಣಕ್ಕೆ ಈ ನಿರ್ಣಯ ತೆಗೆದುಕೊಳ್ಳಲಾಗಿದೆ.

# ಮಳೆಗೆ ಕುಸಿದ ಕಟ್ಟಡ, 7 ಸಾವು

ಅಪಾರ್ಟ್‌ಮೆಂಟ್‌ಗಳ ವಸತಿ ಕಟ್ಟಡವನ್ನು ಅಕ್ರಮವಾಗಿ ನಿರ್ಮಿಸಲಾಗಿದ್ದು, ಬಹುತೇಕ ಖಾಲಿಯಿತ್ತು. ಕೇವಲ ಐದು ಫ್ಲಾಟ್‌ಗಳು ವಾಸವಾಗಿದ್ದು, ನಿವಾಸಿಗಳು ತಿಂಗಳಿಗೆ 1,200 ಬಾಡಿಗೆ ಪಾವತಿಸುತ್ತಿದ್ದರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ."ರಾತ್ರಿಯಿಡೀ ಶೋಧ ಕಾರ್ಯಾಚರಣೆ ಮುಂದುವರೆದಿದೆ. ಏಳು ಮೃತ ದೇಹಗಳನ್ನು ಹೊರ ತೆಗೆಯಲಾಗಿದೆ. ಎಂದು ಮುಖ್ಯ ಅಗ್ನಿಶಾಮಕ ಅಧಿಕಾರಿ ಬಸಂತ್ ಪರೀಕ್ ತಿಳಿಸಿದ್ದಾರೆ.ಏಳನೇ ದೇಹವನ್ನು ಇಂದು ಬೆಳಗ್ಗೆ 6 ಗಂಟೆಗೆ ಹೊರತೆಗೆಯಲಾಯಿತು, ರಕ್ಷಣಾ ಕಾರ್ಯಾಚರಣೆ ಕೊನೆಗೊಂಡಿದೆ. ಮಹಿಳೆಯೊಬ್ಬರನ್ನು ಅವಶೇಷಗಳಡಿಯಿಂದ ರಕ್ಷಿಸಲಾಗಿದ್ದು, ಮಧ್ಯಾಹ್ನ 2.45ರ ಸುಮಾರಿಗೆ ಕಟ್ಟಡ ಕುಸಿದು 15 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಸ್ಥಳದಲ್ಲಿ ಶಿಲಾಖಂಡರಾಶಿಗಳ ಪರ್ವತವನ್ನು ರೂಪಿಸಿದ ದೊಡ್ಡ ಕಾಂಕ್ರೀಟ್ ಚಪ್ಪಡಿಗಳನ್ನು ತೆಗೆದುಹಾಕಲು ರಕ್ಷಣಾ ಸಿಬ್ಬಂದಿ ರಾತ್ರಿಯಿಡಿ ಕೆಲಸ ಮಾಡಿದ್ದಾರೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ2017 ರಲ್ಲಿ ನಿರ್ಮಿಸಲಾದ ಕಟ್ಟಡ ಕುಸಿದಾಗ ಅದರೊಳಗೆ ಐದು ಕುಟುಂಬಗಳು ವಾಸಿಸುತ್ತಿದ್ದವು. ಪೊಲೀಸರ ಪ್ರಕಾರ, ಕುಸಿತ ಸಂಭವಿಸಿದಾಗ ಹಲವಾರು ನಿವಾಸಿಗಳು ಕೆಲಸದಲ್ಲಿದ್ದರು ಆದರೆ ರಾತ್ರಿ ಪಾಳಿಯಲ್ಲಿ ಕೆಲಸ ಮಾಡುತ್ತಿದ್ದ ಅನೇಕರು ಒಳಗೆ ಮಲಗಿದ್ದರು ಎಂದು ಹೇಳಿದ್ದಾರೆ.

# ಭಾರಿ ಮಳೆ ನಿರೀಕ್ಷೆ–ರೆಡ್ ಅಲರ್ಟ್ ಘೋಷಣೆ

ಇಂದು ಕರಾವಳಿ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಮಲೆನಾಡಿನಲ್ಲಿ ಅಬ್ಬರದೊಂದಿಗೆ ಚೇತರಿಕೆಯ ಮಳೆ ಆರಂಭವಾಗಿದೆ. ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನಲ್ಲಿ ದಾಖಲೆ ಮಳೆಯಾಗಿದೆ.ಜುಲೈ 8 ರಿಂದ 10 ರವರೆಗೆ ಎಲ್ಲಾ ಕರಾವಳಿ ಜಿಲ್ಲೆಗಳಲ್ಲಿ ಹಳದಿ ಅಲರ್ಟ್ ಮುಂದುವರೆಯಲಿದೆ.ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು, ಮಂಡ್ಯ, ಮೈಸೂರು, ತುಮಕೂರು, ಕೊಡಗು ಜಿಲ್ಲೆಗಳಲ್ಲಿ ಭಾರಿ ಮಳೆಯಾಗಿದೆ. ನದಿ, ಕೆರೆ, ಹಳ್ಳಕೊಳ್ಳಗಳು ತುಂಬಿದ್ದು, ಅಪಾಯದ ಮಟ್ಟ ಮೀರುವ ಭೀತಿ ಎದುರಾಗಿದೆ. ಜಲಾಶಯಗಳ ಒಳಹರಿವು ಹೆಚ್ಚಿದ್ದು, ಅಣೆಕಟ್ಟುಗಳೂ ಭರ್ತಿಯಾಗುತ್ತಿವೆ.ಹೊಸನಗರ ತಾಲೂಕಿನಾದ್ಯಂತ ಧಾರಾಕಾರ ಮಳೆಯಾಗುತ್ತಿದೆ. ಶರಾವತಿ ಜಲಾನಯನದ ಎರಡೂ ಬದಿ ಹಳ್ಳಕಲ್ಲ ಉಪನದಿಗಳಿಂದ ತುಂಬಿದೆ.ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಮೈಸೂರು, ಕೋಲಾರ, ರಾಮನಗರ, ಹಾಸನ, ಕೊಡಗು, ತುಮಕೂರು, ದಾವಣಗೆರೆ, ಬಳ್ಳಾರಿ ಸೇರಿದಂತೆ ಒಳನಾಡಿನ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ. ಇನ್ನು ಉತ್ತರ ಕರ್ನಾಟಕದ ಕೆಲವೆಡೆ ಮಾತ್ರ ಮಳೆಯಾಗಿದೆ. ಬೆಳಗಾವಿ, ವಿಜಯಪುರ, ಬಾಗಲಕೋಟೆಯಲ್ಲಿ ವಾಡಿಕೆ ಮಳೆಯಾಗಿದೆ. ಹಾವೇರಿ, ಗದಗ, ಕೊಪ್ಪಳ, ಕಲ್ಯಾಣ ಕರ್ನಾಟಕದಲ್ಲಿ ಸದ್ಯಕ್ಕೆ ಮಳೆ ಕೊರತೆ ಎದುರಾಗಿದೆ.

# ಅಸ್ಸಾಂ –ಮಳೆ, ಸಾವಿನ ಸಂಖ್ಯೆ 48ಕ್ಕೇರಿಕೆ

**ಬಾಲಕನಿಗಾಗಿ ಹುಡುಕಾಟ:**

ಬಾರಿ ಮಳೆಯಿಂದ ಚರಂಡಿಯಲ್ಲಿ ಕೊಚ್ಚಿಹೋದ ಮಗನಿಗಾಗಿ ಮೂರು ದಿನ ಕಳೆದರೂ ತಂದೆಯ ಹುಡುಕಾಟದ ಪ್ರಯತ್ನ ನಿಂತಿಲ್ಲ. ಇದಕ್ಕೆ ರಕ್ಷಣಾ ತಂಡಗಳು ಸಾಥ್ ನೀಡಿದ್ದು ರಕ್ಷಣಾ ಕಾರ್ಯ ಮುಂದುವರಿದಿದೆ.ಚರಂಡಿ ನೀರಿನಲ್ಲಿ ಕೊಚ್ಚಿಹೋದ ಎಂಟು ವರ್ಷದ ಬಾಲಕ ಅಭಿನಾಶ್‌ಗಾಗಿ ಅವರ ತಂದೆ ಹೀರಾಲಾಲ್ ಸರ್ಕಾರ್ ಮತ್ತು ಅವರ ಕುಟುಂಬದ ಹುಡುಕಾಟ ಮುಂದುವರೆದಿದೆ.ಹೀರಾಲಾಲ್ ಕಬ್ಬಿಣದ ರಾಡ್ ಅನ್ನು ಬಳಸುತ್ತಿದ್ದರು, ಬಾರಿ ಮಳೆಯಿಂದ ಚರಂಡಿಯಲ್ಲಿ ಬಾಲಕ ಕೊಚ್ಚಿ ಹೋಗಿದ್ದು ಆತನಿಗಾಗಿ ರಕ್ಷಣಾ ಕಾರ್ಯ ಮುಂದುವರಿದಿದೆ. ಮಗನ ಚಪ್ಪಲಿ ಸಿಕ್ಕಿದ್ದು ಆತನಿಗಾಗಿ ರಕ್ಷಣೆ ಮುಂದುವಿರಿದೆ.ಆತ ಸಿಗುವ ತನಕ ವಿರಮಿಸುವುದಿಲ್ಲ ಎಂದು ತಂದೆ ಪ್ರತೀಜ್ಞೆ ಮಾಡಿದ್ದಾರೆ.ಭಾರಿ ಮಳೆಯ ನಡುವೆ ಮನೆಗೆ ವಾಪಸಾಗುತ್ತಿದ್ದಾಗ ಅಭಿನಾಶ್ ತಂದೆಯ ಸ್ಕೂಟರ್‌ನಿಂದ ಜಾರಿ ಚರಂಡಿಗೆ ಬಿದ್ದಿದ್ದ. ಆತನ ರಕ್ಷಣೆಗೆ ಪ್ರಯತ್ನ ಮಾಡಿದ್ದರೂ ಭಾರಿ ಮಳೆ ನೀರು ರಭಸವಾಗಿ ಹರಿಯುತ್ತಿದ್ದ ಹಿನ್ನೆಲೆಯಲ್ಲಿ ನೀರಿಗೆ ಧುಮುಕಿದ್ದರೂ ಮಗನನ್ನು ರಕ್ಷಣೆ ಮಾಡಲು ಸಾಧ್ಯವಾಗಿರಲಿಲ್ಲ.

ರಾತ್ರಿಯಿಡೀ ಅಂಗಡಿಯ ವರಾಂಡಾದಲ್ಲಿ ಹುಡುಕಾಟ ನಡೆಸಿದ. ಟೀ ಶರ್ಟ್ ಮತ್ತು ಹಾಫ್ ಪ್ಯಾಂಟ್ ಧರಿಸಿ, ಅವರು ತಮ್ಮ ಮಗನನ್ನು ಹುಡುಕಲು ಕೆಸರು ಮತ್ತು ಕಸದ ಮೂಲಕ ಅಲೆದಾಡಿದ್ದಾರೆ. ಅವರ ಪ್ರಯತ್ನಕ್ಕೆ ರಕ್ಷಣಾ ತಂಡವೂ ಸಾಥ್ ನೀಡಿದೆ. ರಾಜ್ಯ ಅಧಿಕಾರಿಗಳು ಹೀರಾಲಾಲ್ ಅವರ ಮಗನನ್ನು ಹುಡುಕಲು ಸಹಾಯ ಮಾಡಲು ಅನೇಕ ಏಜೆನ್ಸಿಗಳನ್ನು ಒಳಗೊಂಡ ಬೃಹತ್ ಶೋಧ ಕಾರ್ಯಾಚರಣೆ ಪ್ರಾರಂಭಿಸಿದ್ದಾರೆ. ಸ್ನಿಫರ್ ಡಾಗ್‌ಗಳು, ಸೂಪರ್ ಸಕ್ಕಗಳು ಮತ್ತು ಅಗೆಯುವ ಯಂತ್ರಗಳನ್ನು ಸಹ ನಿಯೋಜಿಸಲಾಗಿದೆ. ನಾಪತ್ತೆಯಾಗಿರುವ ಬಾಲಕನನ್ನು ಪತ್ತೆ ಹಚ್ಚುವ ಪ್ರಯತ್ನದಲ್ಲಿ ಕೆಳಭಾಗದ ಪ್ರದೇಶಗಳಲ್ಲಿ ಕಾಂಕ್ರೀಟ್ ಚಪ್ಪಡಿಗಳಿಂದ ಮುಚ್ಚಿದ ಚರಂಡಿಯ ಭಾಗಗಳನ್ನು ಮೇಲೆತ್ತಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಹೀರಾಲಾಲ್ ಮತ್ತು ಅವರ ಪತ್ನಿ ಮುಖ್ಯಮಂತ್ರಿ ಹಿಮಂತ ಶರ್ಮಾ ಅವರನ್ನು ಭೇಟಿ ಮಾಡಿ ಶೋಧ ಕಾರ್ಯಾಚರಣೆಯನ್ನು ತೀವ್ರಗೊಳಿಸುವಂತೆ ರಕ್ಷಣಾ ತಂಡಗಳಿಗೆ ಆದೇಶ ನೀಡಿದ್ದಾರೆ.

# ಹೆತ್ತವರು ಅನಕ್ಷರಸ್ಥರು, ಮಕ್ಕಳು ಅದ್ಭುತ ಸಾಧಕರು



ಇವತ್ತು ಗೆಳೆಯರೊಂದಿಗೆ ಮಾನ್ವಿ ತಾಲೂಕಿನ ರಾಜಲಬಂಡಾ ಅತಿಥಿ ಗೃಹದ ಮುಂದೆ ಕಾರಿನಿಂದ ಇಳಿದು ನಾಲ್ಕು ಹೆಜ್ಜೆ ಹಾಕಿದ ತಕ್ಷಣವೇ ಗೇಟ್ ನಲ್ಲಿ ನಿಂತಿದ್ದ ಕಾವಲುಗಾರ ಚೆನ್ನಬಸಪ್ಪ ತಮ್ಮಾಪುರ ಅವರು "ನಮಸ್ಕಾರ ಯಾಳಗಿ ಸಾಹೇಬ್ರಿಗೆ ಎಷ್ಟು ವರ್ಷಗಳಾದವು ತಮ್ಮನ್ನು ನೋಡಿ ಎಂದು ಮುಗಳ್ನಕ್ಕು ನಮ್ಮನ್ನು ಪರಿಚಯ ಹಿಡಿದು ಬರ ಮಾಡಿಕೊಂಡಾಗ ನನಗೂ ಎಲ್ಲಿಲ್ಲದ ಖುಷಿ ಎನಿಸಿತು. ಕಾರಣ, ನಾನು ಈ ಚನ್ನಬಸಪ್ಪನವರನ್ನು ನೋಡಿ ಹತ್ತು, ಹದಿನೈದು ವರ್ಷಗಳೇ ಆಗಿದ್ದವು. ಇವರ ಮಕ್ಕಳು ನಮ್ಮ ಕಾಲೇಜಿನಲ್ಲಿ ಅಭ್ಯಾಸ ಮಾಡುತ್ತಿದ್ದಾಗ ಅವಾಗವಾಗ ಕಾಲೇಜಿಗೆ ಬಂದು ಮಕ್ಕಳ ಜೊತೆಗೆ ನಮ್ಮನ್ನು ಮಾತಾಡಿಸಿ ಯೋಗಕ್ಷೇಮ ಕೇಳಿ ಹೋಗುತ್ತಿದ್ದ ಅಪರೂಪದ ಸರಳ, ಸ್ನೇಹಜೀವಿ" ಇವರು.

ಇವತ್ತು ಮತ್ತೆ ಮುಖಾಮುಖಿಯಾದಾಗ ಅದೇ ಪ್ರೀತಿ ಅಭಿಮಾನ ಉಕ್ಕಿ ಹರಿಯಿತು ಅವರ ಸಂಸ್ಕಾರದ ನಮಸ್ಕಾರದ ಸದ್ಭಾವದಲ್ಲಿ. ಸದೃಢ ಶರೀರದ ಈ ಮನುಷ್ಯ ಯಾಕೋ ಒಂದಿಷ್ಟು ವೀಕ್ ಆಗಿದ್ದ "ಯಾಕಪ್ಪ ತುಂಬಾ ತೆಳ್ಳಗಾಗಿದಿ ಎಂದಾಕ್ಷಣ ಬರು ಬರುತ್ತಾ ವಯಸ್ಸು ಬರ್ತದೇನ್ರಿರಿ, ತಾವು ಬಹಳ ವರ್ಷಗಳ ನಂತರ ನೋಡಿರಿ ಅದ್ಕ ಹಂಗ ಅನಸ್ತಾದ" ಎನ್ನುತ್ತಲೇ, ತಾವೇ ಮಾತು ಮುಂದುವರಿಸಿ ನೀವು ಹೇಳಿದ್ದು ಸರಿ ಇದೆ ಸರ್. ಮೊದಲು ಬಹಳ ಗಟ್ಟಿ ಮುಟ್ಟಿದ್ದೆ, ಇತ್ತೀಚೆಗೆ ನಾಲ್ಕು ವರ್ಷಗಳಿಂದ ಶುಗರ್, ಬಿಪಿ ಬಂದು ನಮಗೊಂದಿಷ್ಟು ಮೆತ್ತಾಗ ಮಾಡ್ಯಾದ. ಮೇಲಾಗಿ, ಎಕ್ಸಡೆಂಟ್ ಆಗಿ ಕೈ ಮುರಿದಿತ್ತು ಇನ್ನೂ ಮ್ಯಾಲ ಎತ್ತಾಕ ಸರಿಯಾಗಿ ಬರುವಲ್ಲದು ಸರ್ ಎನ್ನುತ್ತಲೇ ನಮ್ಮನ್ನು ಒಳಗೆ ಕರೆದುಕೊಂಡು ಹೋಗಿ ಸೋಫಾ ಸೆಟ್ ಮೇಲೆ ಕುಡಿಸಿ ಫ್ಯಾನ್ ಹಾಕಿ ನಮ್ಮ ಜೊತೆ ಕುಳಿತ. ನಮ್ಮ ಗೆಳೆಯರೆಲ್ಲರೂ ಸುತ್ತಾಡಿಕೊಂಡು ಬರಲು ಹೊರ ಹೋಗುತ್ತೇವೆ ಬರ್ತಿರಾ? ಎಂದಾಗ

ನಮ್ಮ ಧರ್ಮಪತ್ನಿಗೂ ಹಾಗೂ ನಮ್ಮ ಗೆಳೆಯರಿಗೂ ಚೆನ್ನಬಸಪ್ಪನವರನ್ನು ಪರಿಚಯಿಸಿದೆ, ಇವರ ಮಕ್ಕಳು ಚೆನ್ನಾಗಿ ಓದಿಕೊಂಡ ಬಗೆಯನ್ನು ಬಿತ್ತರಿಸಿ ಅವರನ್ನು ಬೀಳ್ಕೊಟ್ಟು ನಮ್ಮ ಚೆನ್ನಬಸಪ್ಪನವರ ಮುಂದೆ ಮಾತಾಡ್ತಾ ನಾ ಕುಳಿತು ಬಿಟ್ಟು ಕೆಲ ಸಮಯ.

ಈ ಚೆನ್ನಬಸವಪ್ಪನವರು ಮೂಲತಃ ರಾಜಲಬಂಡಾದ ಪಕ್ಕದ ತಮ್ಮಾಪುರ ಗ್ರಾಮದವರು. ಇವರ ತಂದೆ ರಾಮಣ್ಣ ತಾಯಿ ಸಾಬಮ್ಮನವರ ಪ್ರೀತಿಯ ಮೂರನೇ ಮಗ. ರಾಮಣ್ಣ ಸಾಬಮ್ಮ ದಂಪತಿಗಳಿಗೆ ಒಟ್ಟು ಆರು ಮಕ್ಕಳು ಈ ಆರು ಮಕ್ಕಳು ಶಾಲೆಯ ಮುಖವನ್ನೇ ನೋಡದವರು. ಇದ್ದ ಆರ ಎಕರೆ ಜಮೀನು ನಲ್ಲಿ ದುಡಿದು ಮಕ್ಕಳನ್ನು ದೊಡ್ಡವರನ್ನಾಗಿಸಿದ್ದಾರೆ. ಆರು ಮಕ್ಕಳು ಅವರವರ ಪಾಡಿಗೆ ಎಲ್ಲರೂ ಜೀವನ ಸಾಗಿಸುತ್ತಿದ್ದಾರೆ.

ಈ ಚೆನ್ನಬಸಪ್ಪ ಗಂಗಮ್ಮ ದಂಪತಿಗಳಿಗೆ ಒಟ್ಟು ಒಂಬತ್ತು ಮಕ್ಕಳು ಆರು ಜನ ಗಂಡು ಮಕ್ಕಳು ಮೂರು ಜನ ಹೆಣ್ಣು ಮಕ್ಕಳು. ಈ ಒಂಬತ್ತು ಮಕ್ಕಳು ಹತ್ತನೆಯ ತರಗತಿಯವರೆಗೆ ಸ್ವ ಗ್ರಾಮ ತಮ್ಮಾಪುರದ ಸರಕಾರಿ ಪ್ರಾಥಮಿಕ ಶಾಲೆ ಮತ್ತು ರಾಜಲಬಂಡಾದ ಸರಕಾರಿ ಪ್ರೌಢಶಾಲೆಯಲ್ಲಿ ಓದಿದವರು.

ಹಿರಿಯ ಮಗಳು ಹನುಮಂತಮ್ಮನವರು ಬಿ.ಎ.ಬಿ ಎಡ್ ಪದವಿ ಮುಗಿಸಿಕೊಂಡು ಗುಂಜಳ್ಳಿ ಸರಕಾರಿ ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಎರಡನೇ ಮಗ ಬಂಗಾರಪ್ಪವರು ಆರ್ಮಿಯಲ್ಲಿ ಸೈನಿಕ ನಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ, ಮೂರನೆಯ ಮಗ ನಮ್ಮ ಮಾನ್ವಿ ತಾಲೂಕಿನ ಶ್ರೀನಿವಾಸಪುರ ಕ್ಯಾಂಪ್ ನ ಸರಕಾರಿ ಶಾಲೆಯಲ್ಲಿ ಶಿಕ್ಷಕ ವೃತ್ತಿಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ನಾಲ್ಕನೆಯ ಮಗ ರಾಮೇಶ ಪೋಲಿಸ್ ಆಗಿ ಬೆಂಗಳೂರಿನಲ್ಲಿ ಸೇವೆ ಸಲ್ಲಿಸಿ ವೃತ್ತಿಗೆ ರಾಜೀನಾಮೆ ನೀಡಿ ಕೆಎಎಸ್ ಪರೀಕ್ಷೆ ಬರೆಯಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾನಂತೆ.

ಐದನೆಯ ಮಗ ಅಯ್ಯಪ್ಪ ಎಂ ಬಿ ಬಿ ಎಸ್ ಮಡಿಕೇರಿಯಲ್ಲಿ ಓದಿ ಈಗ ಹೌಸಮನ್ ಶಿಪ್ ಕಾರವಾರದಲ್ಲಿ ಮಾಡುತ್ತಿದ್ದಾನೆ.

ಆರನೆಯ ಮಗಳು ಅಂಬಮ್ಮನವರು ಎಂ. ಕಾಂ ಸ್ನಾತಕೋತ್ತರ ಪದವಿ ಮುಗಿಸಿ ವಿಜಯಪುರದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆಯುತ್ತಿದ್ದಾಳೆ.

ಏಳನೆಯ ಮಗ ಗಂಗಪ್ಪ ರಾಯಚೂರಿನ ಎಲ್ ವಿ ಡಿ ಕಾಲೇಜಿನಲ್ಲಿ ಬಿ.ಎ ದ್ವಿತೀಯ ವರ್ಷದಲ್ಲಿ ಓದುತ್ತಿದ್ದಾನೆ. ಎಂಟನೆಯ ಮಗಳು ಭೀಮಮ್ಮನವರು ಸಹ ಮಾನ್ವಿ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎ.ಪ್ರಥಮ ವರ್ಷದಲ್ಲಿ ಅಭ್ಯಾಸ ಮಾಡುತ್ತಿದ್ದಾರೆ.ಈ ದಂಪತಿಗಳಿಗೆ ಕೊನೆಯ ಮಗ ಕರಿಯಪ್ಪ ಹುಲಿ ಅವರು ಬೆಂಗಳೂರಿನಲ್ಲಿ ಪಿಯುಸಿ ಸೈನ್ಸ್ ವಿಭಾಗದಲ್ಲಿ ಓದುತ್ತಿದ್ದಾನೆ.

ಈ ಚೆನ್ನಬಸವಪ್ಪ ಗಂಗಮ್ಮ ದಂಪತಿಗಳು ತಾವು ಓದದಿದ್ದರೂ ತಮ್ಮ ಮಕ್ಕಳನ್ನು ಉತ್ತಮ ರೀತಿಯಲ್ಲಿ ಓದಲು ಅನುವು ಮಾಡಿಕೊಟ್ಟಿದ್ದು, ಅವರ ಮಕ್ಕಳು ಕೂಡಾ ಚೆನ್ನಾಗಿ ತಮ್ಮನ್ನು ತಾವು ಅಭ್ಯಾಸದಲ್ಲಿ ತೊಡಗಿಸಿಕೊಂಡು ಉತ್ತಮ ಶೈಕ್ಷಣಿಕ ಸಾಧನೆಯೊಂದಿಗೆ ಹೆತ್ತವರ ಕೀರ್ತಿ ಹೆಚ್ಚಿಸಿರುವುದು ಹೆಮ್ಮೆಯ ವಿಷಯವಾಗಿದೆ.


ಒಂಬತ್ತು ಮಕ್ಕಳಲ್ಲಿ ಹನುಮಂತಮ್ಮ, ಬಂಗಾರಪ್ಪ, ಗುಂಡಪ್ಪನವರ ಮದುವೆ ಮಾಡಿದ್ದೇನೆ ಸರ್ ಇನ್ನೂ ಆರು ಮಕ್ಕಳ ಮದುವೆ ಜವಾಬ್ದಾರಿ ನಮ್ಮ ಮೇಲಿದೆ.ನಮ್ಮ ಮಕ್ಕಳು ಚೆನ್ನಾಗಿ ಓದ್ತಾ ಇದ್ದಾರೆ ಸರ್, ನಿಮ್ಮಂತಹ ಗುರುಗಳ ಆಶೀರ್ವಾದದಿಂದ ಎಲ್ಲಾ ಮಕ್ಕಳು ಹೆತ್ತವರಾದ ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಾ ಇದ್ದಾರೆ ಎಂದು ಬಾಯಿ ತುಂಬಾ ಪ್ರೀತಿಯ ಮಾತುಗಳನ್ನಾಡಿದ ಚೆನ್ನಬಸವಪ್ಪ ದಂಪತಿಗಳಿಗೆ ನಾವು ನಿಜಕ್ಕೂ ಅಭಿನಂದಿಸಲೇಬೇಕು "ಮಕ್ಕಳಿಗೆ ಆಸ್ತಿ ಸಂಪಾದಿಸಬೇಡಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ" ಎಂಬ ಮಾತು ನೂರಕ್ಕೆ ನೂರರಷ್ಟು ಜೀವನದಲ್ಲಿ ಅಳವಡಿಸಿಕೊಂಡು ಎಲ್ಲಾ ಒಂಬತ್ತು ಮಕ್ಕಳಿಗೂ ಶಿಕ್ಷಣ ಕೊಡಿಸಿದ ಈ ಹೆತ್ತವರ ಸಾಧನೆ ನಿಜಕ್ಕೂ ಪ್ರಶಂಸನೀಯ.

**–ರಮೇಶಬಾಬು ಯಾಳಗಿ**

# ಅಸ್ವಸ್ಥ ವಿದ್ಯಾರ್ಥಿಗಳಿಗೆ ಸಾಂತ್ವನ ಹೇಳಿದ ಮಾಜಿ ಶಾಸಕ

ಮಾನ್ವಿ:–

ಪಟ್ಟಣದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ನಿಲಯ ರಾಜಲಬಂಡಾ ವಿಷಪೂರಿತ ಆಹಾರ ಸೇವನೆ ಮಾಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಭೇಟಿ ನೀಡಿ ಮಕ್ಕಳಿಗೆ ಹಾಗೂ ಪಾಲಕರಿಗೆ ಸಾಂತ್ವನ ಹೇಳಿ ಅಧಿಕಾರಿಗಳ ವಿರುದ್ಧ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು. ನಂತರ ಮಾತಾ ನಾಡಿದ ಅವರು ವಸತಿ ನಿಲಯಗಳಲ್ಲಿ ಬಡ ಕುಟುಂಬದ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿರುತ್ತಾರೆ ಆದರಿಂದ ವಸತಿ ನಿಲಯ ಮೇಲ್ವಿಚಾರಕರಾಗಲಿ ಪ್ರಾಚಾರ್ಯರಾಗಲಿ ಇತರೆ ಸಿಬ್ಬಂದಿಳಾಗಲಿ ಬಹಳ ಕಾಳಜಿ ವಹಿಸಬೇಕಾಗುತ್ತದೆ ಎಂದು ನಂತರ ಇತ್ತೀಚಿನ ದಿನಗಳಲ್ಲಿ ಮಾನ್ವಿಯ ವಿವಿಧ ವಸತಿ ನಿಲಯಗಳಲ್ಲಿ ಈ ರೀತಿಯ ದುರ್ಘಟನೆಗಳು ಅಧಿಕವಾಗುತ್ತಿದ್ದು ತಾಲೂಕ ಆಡಳಿತ ಹಾಗೂ ಅಧಿಕಾರದಲ್ಲಿರುವ ಶಾಸಕರು ಗಮನವಹಿಸಬೇಕು ಎಂದು ಹೇಳಿದರು. ನಂತರ ವಿದ್ಯಾರ್ಥಿಗಳಿಗೆ ಹಣ್ಣು ಹಂಪಲುಗಳನ್ನು ನೀಡಿದರ. ಈ ಸಂದರ್ಭದಲ್ಲಿ ಜೆಡಿಎಸ್ ಕಾರ್ಯಕರ್ತರು ಇದ್ದರು.



# 7 ಸಾವಿರ ಡೆಂಗ್ಯು ಸೋಂಕು ಪತ್ತೆ ರಾಜ್ಯದಲ್ಲಿ ಡೆಂಗ್ಯು ಉಲ್ಬಣ, ಸೋಂಕು ಆತಂಕ

ವರದಿಯಾಗಿರುವ ಹಿನ್ನೆಲೆಯಲ್ಲಿ ಜನರು ಮತ್ತಷ್ಟು ಆತಂಕಕ್ಕೆ ಒಳಗಾಗುವಂತೆ ಮಾಡಿದೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 1908 ಹೊಸ ಪ್ರಕರಣ ಧೃಡಪಟ್ಟಿದೆ. ಇನ್ನು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಗಗನ್ ಚಿಕಿತ್ಸೆ ಫಲಿಸದೇ ತಡರಾತ್ರಿ ಮೃತಪಟ್ಟಿದ್ದಾನೆ. ಗಗನ್ ಜಂಬೂಸವಾರಿ ದಿಣ್ಣೆಯ ಖಾಸಗಿ ಶಾಲೆಯಲ್ಲಿ ಓದುತ್ತಿದ್ದ. ಬಾಲಕನನ್ನ ಕಳೆದುಕೊಂಡ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.ದಿನ ದಿನಕ್ಕೂ ಹೆಚ್ಚಾಗ್ತಿರೋ ಡೆಂಗ್ಯೂ ತಡೆಗೆ ಗದಗ ಜಿಲ್ಲೆಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗ್ತಿದೆ. ಡೆಂಘೀ ಹರಡುವ ಪ್ರದೇಶಗಳಲ್ಲಿ ಲಾರ್ವಾ ಸರ್ವೇ ಮಾಡಲಾಗ್ತಿದೆ. ಲಾರ್ವಾ ನಾಶಕ್ಕೆ ನೀರಿನ ಟ್ಯಾಂಕ್ ಗಳಿಗೆ ಗಪ್ಪಿ, ಗಾಂಬೂಸಿಯಾ ಮೀನುಗಳನ್ನ ಬಿಡಲಾಗ್ತಾಯಿದೆ. ಕೆರೆಗಳು, ಮನೆ ಮನೆಗಳಲ್ಲಿ ತೆರೆದ ನೀರಿನ ಟ್ಯಾಂಕ್‌ಗಳಿಗೂ ಮೀನು ಬಿಡಲಾಗ್ತಿದೆ. ಆ ಮೂಲಕ ಡೆಂಘೀ ತಡೆಗೆ ಆರೋಗ್ಯ ಇಲಾಖೆ ಮುಂದಾಗಿದೆ.

**ಝೀಕಾಗೆ ಮೊದಲ ಬಲಿ**

ರಾಜ್ಯದಲ್ಲಿ ಡೆಂಘೀ ಅಬ್ಬರ ಹೆಚ್ಚಾಗಿರುವ ನಡುವೆ ರಾಜ್ಯದಲ್ಲಿ ಝೀಕಾ ವೈರಸ್ ಆರ್ಭಟ ಶುರುವಾಗಿದೆ. ಶಿವಮೊಗ್ಗದ ಗಾಂಧಿನಗರದಲ್ಲಿ 74 ವರ್ಷದ ವೃದ್ಧ ಝೀಕಾ ಸೋಂಕಿಗೆ ಮೊದಲ ಬಲಿಯಾಗಿದ್ದಾರೆ.ಜೂನ್ 19ರಂದು ವೃದ್ಧನಿಗೆ ತೀವ್ರ ಜ್ವರ ಕಾಣಿಸಿಕೊಂಡಿತ್ತು. ಬಳಿಕ ಆತನನ್ನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜೂನ್ 21ರಂದು ವೃದ್ಧನಲ್ಲಿ ಝೀಕಾ ವೈರಸ್ ಪತ್ತೆಯಾಗಿತ್ತು. ಶಿವಮೊಗ್ಗದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಳಿಕ ಕುಟುಂಬದವರು ಜುಲೈ 4ರಂದು ಡಿಸ್ಚಾರ್ಜ್ ಮಾಡಿಸಿಕೊಂಡು ಮನೆಗೆ ಕರೆದೊಯ್ದಿದ್ದರು. ಆದರೆ ಮನೆಯಲ್ಲಿದ್ದ ವೃದ್ಧ ಮೃತಪಟ್ಟಿದ್ದು, ಶಿವಮೊಗ್ಗ ಜಿಲ್ಲೆಯಲ್ಲಿ ಝೀಕಾ ಆತಂಕ ಸೃಷ್ಟಿಸಿದೆ.

# ಆಸ್ತಿ ತೆರಿಗೆ ಪಾವತಿಗೆ ಅವಧಿ ವಿಸ್ತರಣೆ : ನಬಿ. ಕಂದಗಲ್

ಮುದಗಲ್:–

2024–25ನೇ ಸಾಲಿನ ಆಸ್ತಿ ತೆರೆಗೆ ಪಾವತಿಗೆ ನೀಡಲಾಗುತ್ತಿರುವ ಶೇಕಡಾ 5 ರ ರಿಯಾಯಿತಿ ಅವಧಿ ಇದೆ ತಿಂಗಳು 31 ವರಗೆ ವಿಸ್ತರಣೆ ಮಾಡಲಾಗಿದೆ ಎಂದು ಮುಖ್ಯಾಧಿಕಾರಿ ನಬಿ. ಎಂ. ಕಂದಗಲ್ ಹೇಳಿದರು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 105(1)ರನ್ವಯ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ) ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ, ಶೇಕಡಾ 5ರಷ್ಟು ರಿಯಾಯಿತಿ ನೀಡಲು ಕಲ್ಪಿಸಿರುವ ಅವಕಾಶದ ಅವಧಿಯನ್ನು ದಿನಾಂಕ: 31.07.2024ರವರೆಗೆ ವಿಸ್ತರಿಸಿ ಆದೇಶ ನೀಡಿದ ಹಿನ್ನಲೆಯಲ್ಲಿ ಪಟ್ಟಣದ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕೆಂದು ಮುಖ್ಯಾಧಿಕಾರಿ ನಬಿ. ಎಂ. ಕಂದಗಲ್ ಕರೆ ನೀಡಿದರು.

# ಸಂಪೂರ್ಣತಾ ಅಭಿಯಾನ ಯಶಸ್ವಿಗೆ ಶ್ರಮಿಸೋಣ : ಜಿಲ್ಲಾಧಿಕಾರಿ ಕರೆ



ವಿಜಯಪುರ:–

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲೊಂದಾದ "ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮ"ದಡಿ "ಸಂಪೂರ್ಣತಾ ಅಭಿಯಾನ ಉತ್ಸವ" ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ತಾಲೂಕಾ ಮಟ್ಟದಲ್ಲಿನ ಜನರ ಜೀವನ ಮಟ್ಟ ಸುಧಾರಿಸಲು ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರು ಕರೆ ನೀಡಿದರು. ಈ ಯೋಜನೆಯಡಿ ರಾಜ್ಯದಲ್ಲಿ ಒಟ್ಟು 14 ತಾಲ್ಲೂಕುಗಳನ್ನು ಗುರುತಿಸಿದ್ದು, ಇದರಲ್ಲಿ ವಿಜಯಪುರ ಜಿಲ್ಲೆಯ ತಾಳಿಕೋಟೆ ತಾಲ್ಲೂಕನ್ನು ಆಯ್ಕೆ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಶುಕ್ರವಾರದಂದು ತಾಳಿಕೋಟೆ ಪಟ್ಟಣದ ಸಂಗಮೇಶ್ವರ ಸಭಾಭವನದಲ್ಲಿ ನೀತಿ ಆಯೋಗ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತಿ ಮತ್ತು ತಾಲೂಕು ಆಡಳಿತ, ತಾಲೂಕು ಪಂಚಾಯತಿ ತಾಳಿಕೋಟೆ ಇವರ ಸಹಯೋಗದೊಂದಿಗೆ ಆಯೋಜಿಸಿದ್ದ "ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮ"ದಡಿ "ಸಂಪೂರ್ಣತಾ ಅಭಿಯಾನ ಉತ್ಸವ"ಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು. ಆಯ್ಕೆಯಾದ ತಾಲ್ಲೂಕಿನಲ್ಲಿ ಜನರ ಜೀವನ ಮಟ್ಟವನ್ನು ಸುಧಾರಿಸಲು ಪ್ರಮುಖ ಸೇವಾ ವಲಯಗಳಾದ ಆರೋಗ್ಯ, ಪೌಷ್ಠಿಕತೆ, ಶಿಕ್ಷಣ, ಕುಡಿಯುವ ನೀರು ಮತ್ತು ನೈರ್ಮಲ್ಯ, ಕೃಷಿ, ಜಲ ಸಂಪನ್ಮೂಲಗಳು, ಆರ್ಥಿಕ ಸೇರ್ಪಡೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಿ ಮೇಲಿನ ಎಲ್ಲಾ ವಲಯಗಳಲ್ಲಿ 2 ವರ್ಷಗಳ ಅವಧಿಯಲ್ಲಿ ರಾಜ್ಯ ಮಟ್ಟದ ಸರಾಸರಿ ಅಭಿವೃದ್ಧಿ ಸೂಚ್ಯಾಂಕಗಳಿಗೆ ಸರಿ ಸಮನಾಗಿ ಪ್ರಗತಿಯನ್ನು ಸಾಧಿಸಿ, ಸೂಚ್ಯಾಂಕಗಳ ಸುಸ್ಥಿರತೆಯನ್ನು ಕಾಪಾಡಿಕೊಳ್ಳುವ ಗುರಿಯನ್ನು ಹೊಂದಲಾಗಿದೆ. ಜುಲೈ 4 ರಿಂದ ಸೆಪ್ಟೆಂಬರ್ 30 ವರೆಗೆ ಈ ಅಭಿಯಾನವು ನಡೆಯಲಿದೆ ಎಂದು ಹೇಳಿದರು. ಭಾರತ ಸರ್ಕಾರದ ನೀತಿ ಆಯೋಗದವರು ಮಹತ್ವಾಕಾಂಕ್ಷಿ ಜಿಲ್ಲೆಗಳ ಕಾರ್ಯಕ್ರಮದ ಯಶಸ್ಸಿನ ಆಧಾರದನ್ವಯ ದೇಶದಲ್ಲಿ 39 ಬಹು ಆಯಾಮದ ಸೂಚ್ಯಂಕಗಳಲ್ಲಿ ರಾಜ್ಯ ಮತ್ತು ಕೇಂದ್ರ ಮಟ್ಟದ ಸರಾಸರಿ ಅಭಿವೃದ್ಧಿಗಿಂತ ಕಡಿಮೆ ಇರುವ 500 ತಾಲ್ಲೂಕುಗಳನ್ನು ಮಹತ್ವಾಕಾಂಕ್ಷಿ ತಾಲ್ಲೂಕುಗಳೆಂದು ಆಯ್ಕೆ ಮಾಡಿರುತ್ತಾರೆ. ಮಹತ್ವಾಕಾಂಕ್ಷೆಯ ತಾಲೂಕಿನಲ್ಲಿ ಆರು ಪ್ರಮುಖ ಕಾರ್ಯಕ್ಷಮತೆ ಸೂಚಕಗಳಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸುವ ಗುರಿಯನ್ನು ಹೊಂದಿದೆ. ಇದು ಮುಂದಿನ 90 ದಿನಗಳಲ್ಲಿ ವ್ಯಾಪಕ ಪ್ರಚಾರ ನೀಡಿ ನಿಗದಿತ ಗುರಿ ಸಾಧಿಸಲು ನಾವೆಲ್ಲರೂ ಶ್ರಮಿಸೋಣ ಎಂದು ಅವರು ಹೇಳಿದರು. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ನೀತಿ ಆಯೋಗದಡಿ ಜಿಲ್ಲೆಯ ತಾಳಿಕೋಟೆ ತಾಲೂಕನ್ನು ಮಹತ್ವಾಕಾಂಕ್ಷಿ ತಾಲೂಕು ಎಂದು ಆಯ್ಕೆಮಾಡಲಾಗಿದೆ. ಸದ್ಯ ಆಯ್ಕೆ ಮಾಡಲಾದ ಜನರ ಜೀವನ ಮಟ್ಟವನ್ನು ಸುಧಾರಿಸಲು ಪ್ರಮುಖ ಸೇವಾ ವಲಯಗಳಾದ ಆರೋಗ್ಯ, ಶಿಕ್ಷಣ, ಮೂಲಸೌಲಭ್ಯ, ಸಾಮಾಜಿಕ ಅಭಿವೃದ್ಧಿ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸುಧಾರಣೆ ತರುವ ಮೂಲಕ ಜನರ ಜೀವನಮಟ್ಟ ಎತ್ತರಿಸುವ ಉದ್ದೇಶ ಈ ಕಾರ್ಯಕ್ರಮದ್ದಾಗಿದೆ. ತಾಲೂಕಿನಲ್ಲಿ 6 ಪ್ರಮುಖ ಸೂಚಕಗಳ ಸಂಪೂರ್ಣತೆಯನ್ನು ಸಾಧಿಸಲು ಸುಸ್ಥಿರ ಪ್ರಯತ್ನ ಕೈಗೊಳ್ಳಲು ನೀತಿ ಆಯೋಗವು, ಇಂದಿನಿಂದ 3 ತಿಂಗಳ ಕಾಲ ಸಂಪೂರ್ಣತಾ ಅಭಿಯಾನ ಹಮ್ಮಿಕೊಂಡಿದೆ ಎಂದು ಹೇಳಿದರು. ಪ್ರಸವಪೂರ್ವ ಆರೈಕೆ ನೋಂದಣಿ, ಮಧುಮೇಹ ತಪಾಸಣೆ, ಅಧಿಕ ರಕ್ತದೊತ್ತಡ ಸ್ಕ್ರೀನಿಂಗ್, ಪೂರಕ ಪೊಷಣೆ, ಮಣ್ಣಿನ ಆರೋಗ್ಯ ಪರೀಕ್ಷೆ ಹಾಗೂ ಸ್ವಸಹಾಯ ಗುಂಪುಗಳಿಗೆ ಆವರ್ತ ನಿಧಿ ನೀಡುವ ಮೂಲಕ ಶೇ.100 ರಷ್ಟು ಪ್ರಗತಿ ಸಾಧಿಸಲು ಅಧಿಕಾರಿಗಳು ಶ್ರಮಿಸಬೇಕು ಮತ್ತು ತಾಲೂಕಿನಲ್ಲಿ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಸಂಪೂರ್ಣತಾ ಅಭಿಯಾನದಲ್ಲಿನ ಎಲ್ಲಾ ಸೂಚ್ಯಂಕಗಳಲ್ಲಿ ಪೂರ್ಣ ಪ್ರಗತಿಯನ್ನು ಸಾಧಿಸಬೇಕು ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ 10 ಜನ ಗರ್ಭಿಣಿ ಮಹಿಳೆಯರಿಗೆ ತಾಯಿ ಕಾರ್ಡ್, 5 ಜನ ಮೇಲ್ವಿಚಾರಕರಿಗೆ ಪೊಷಣ್ ಟ್ರ್ಯಾಕರ್ ಮೊಬೈಲ್, 5 ಫಲಾನುಭವಿಗಳಿಗೆ ಸುಕನ್ಯಾ ಸಮೃದ್ಧಿ ಯೋಜನೆಯ ಪಾಸ್ ಬುಕ್ ಹಾಗೂ 20 ಜನ ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡಲಾಯಿತು. ಇದೇ ವೇಳೆ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮವನ್ನೂ ಸಹ ನೆರವೇರಿಸಲಾಯಿತು.

**ಗಮನ ಸೆಳೆದ ವಸ್ತು ಪ್ರದರ್ಶನ ಮಳಿಗೆಗಳು :**

ಜಲ ಜೀವನ ಮಿಷನ್, ತೋಟಗಾರಿಕೆ ಇಲಾಖೆ, ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಸ್ವ ಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ಉತ್ಪನ್ನಗಳು ಹಾಗೂ ಮಹಾತ್ಮಗಾಂಧಿ ನರೇಗಾ ಯೋಜನೆಯ ಮಾಹಿತಿಯುಳ್ಳ ಮಾಹಿತಿ ಕೇಂದ್ರ ಹೀಗೆ ವಿವಿಧ ಇಲಾಖೆಗಳ ಸಹಕಾರದಲ್ಲಿ ಏರ್ಪಡಿಸಲಾಗಿದ್ದ ವಸ್ತು ಪ್ರದರ್ಶನ ಮಳಿಗೆಗಳು ಎಲ್ಲರ ಗಮನ ಸೆಳೆದವು. ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿ ಎ. ಬಿ. ಅಲ್ಲಾಪೂರ ಅವರು ಸಂಪೂರ್ಣತಾ ಅಭಿಯಾನದ ಪ್ರತಿಜ್ಞಾ ವಿಧಿ ಬೋಧಿಸಿದರು. ತಾಳಿಕೋಟೆ ಪಟ್ಟಣದ ಬಸವೇಶ್ವರ ಸರ್ಕಲ್‌ನಿಂದ ಸಂಗಮೇಶ್ವರ ಕಲ್ಯಾಣ ಮಂಟಪದವರೆಗೆ ಸಂಪೂರ್ಣತಾ ಅಭಿಯಾನ ಜಾಗೃತಿ ಜಾಥಾ ಅತೀ ವಿಜೃಂಭಣೆಯಿಂದ ಜರುಗಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಜಿ.ಪಂ. ಯೋಜನಾ ನಿರ್ದೇಶಕ ಸಿ. ಬಿ. ದೇವರಮನಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ. ಕುಂಬಾರ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿ ಎ. ಬಿ. ಅಲ್ಲಾಪೂರ, ತಾಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಬಿ.ಆರ್. ಬಿರಾದಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಎನ್.ಎಚ್. ನಾಗೂರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೆ.ಕೆ ಚವ್ಹಾಣ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರಾಜಶೇಖರ ವಿಲಿಯಮ್ಸ್, ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿ ಅನ್ನಪ್ಪಸ್ವಾಮಿ, ಪಶು ಸಂಗೋಪನೆ ಇಲಾಖೆಯ ಉಪನಿರ್ದೇಶಕ ಡಾ. ಘೋಣಸಗಿ, ತಹಸೀಲ್ದಾರ ಪ್ರೇಮಸಿಂಗ್ ಪವಾರ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ ಲಮಾಣಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಾವಳಗಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕುಂಬಾರ, ತಾಲೂಕು ಆರೋಗ್ಯ ಅಧಿಕಾರಿ ಸತೀಶ ತಿವಾರಿ, ತಮದಡ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಮಡಿವಾಳರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಹಿರೇಗೌಡರ, ಹಿರೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಿ. ಎಸ್. ಮಠ, ಕೊಡಗಾನೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅನಿಲಕುಮಾರ ಕಿರಣಗಿ, ಜಿಲ್ಲಾ, ತಾಲೂಕು, ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳು, ಸಿಬ್ಬಂದಿಯವರು, ಸರ್ವ ಸದಸ್ಯರು, ಗರ್ಭಿಣಿಯರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪ್ರಗತಿಪರ ರೈತರು ಹಾಗೂ ಇತರರು ಉಪಸ್ಥಿತರಿದ್ದರು.

**ನೀತಿ ಆಯೋಗದ ಅಧಿಕಾರಿಗಳಿಂದ ಪರಿಶೀಲನೆ :**

ತಾಳಿಕೋಟೆ ತಾಲೂಕಿಗೆ ಮಹತ್ವಾಕಾಂಕ್ಷಿ ತಾಲ್ಲೂಕು ಕಾರ್ಯಮದಡಿ ಸಂಪೂರ್ಣತಾ ಅಭಿಯಾನದ ಉತ್ಸವ ಕಾರ್ಯಕ್ರಮದ ನಿಮಿತ್ತ ಜಿಲ್ಲೆಗೆ ಆಗಮಿಸಿರುವ ನೀತಿ ಆಯೋಗದ ಅಧಿಕಾರಿಗಳು "ಸಂಪೂರ್ಣತಾ ಅಭಿಯಾನ ಉತ್ಸವ"ದ ಕಾರ್ಯಕ್ರಮದಡಿ ಇರುವ ಸೂಚ್ಯಂಕಗಳಿಗೆ ಸಂಬಂಧಿಸಿದಂತೆ ಹಿರೂರ ಗ್ರಾಮ ಪಂಚಾಯತಿ, ತಾಳಿಕೋಟೆ ಪಟ್ಟಣದ ಪಶು ಆಸ್ಪತ್ರೆ ಆಸ್ಪತ್ರೆ, ತಮದಡ್ಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದರು. ಬಳಿಕ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು. ಕೊಡಗಾನೂರ ಗ್ರಾಮ ಪಂಚಾಯತಿಯಲ್ಲಿ ಬಿ.ಎಸ್.ಎನ್.ಎಲ್ ಸಂಪರ್ಕ ವ್ಯವಸ್ಥೆ ಹಾಗೂ ತಮದಡ್ಡಿ ಗ್ರಾಮದ ಜಲ ಜೀವನ ಮಿಷನ್ ಯೋಜನೆಯಡಿ ನಿರ್ಮಿಸಿದ ಕಾಮಗಾರಿಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

# ಭಾರತ್ ಅಕ್ಕಿ ಸ್ಥಗಿತ ಕಾಂಗ್ರೆಸ್ ಆಕ್ರೋಶ



ಬೆಂಗಳೂರು:–

ಲೋಕಸಭಾ ಚುನಾವಣೆಯಲ್ಲಿ ಕೇವಲ ಜನರಿಂದ ಮತ ಪಡೆಯಲು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸರ್ಕಾರ ಭಾರತ್ ಅಕ್ಕಿ ಯೋಜನೆಯನ್ನು ಜಾರಿಗೆ ತಂದು ಇಂದು ಈ ಯೋಜನೆಯನ್ನು ಸ್ಥಗಿತಗೊಳಿಸಿರುವುದು ಜನತೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಬಗೆದ ದ್ರೋಹವಾಗಿದೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್ ತಿಳಿಸಿದ್ದಾರೆ. ನಗರದ ಗಾಂಧಿ ಪ್ರತಿಮೆ ಬಳಿ ಇಂದು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕರ್ನಾಟಕದಲ್ಲಿ ಐದು ಯೋಜನೆಗಳನ್ನು ಕಾಂಗ್ರೆಸ್ ಪಕ್ಷ ಜಾರಿಗೆ ತಂದು ಕೋಟ್ಯಾಂತರ ಫಲಾನುಭವಿಗಳಿಗೆ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದು ಎಲ್ಲ ಯೋಜನೆಗಳನ್ನು ಜಾರಿಗೊಳಿಸಿದೆ ಆದರೆ ಕೇವಲ ಒಂದು ಯೋಜನೆಯನ್ನು ಜಾರಿಗೆ ತಂದ ಬಿಜೆಪಿ ಸರ್ಕಾರ ಅಕ್ಕಿ ಯೋಜನೆಯನ್ನು ಕೇವಲ ನಾಲ್ಕು ತಿಂಗಳ ಅವಧಿಯಲ್ಲಿ ರದ್ದುಗೊಳಿಸಿರುವುದು ನರೇಂದ್ರ ಮೋದಿಯ ದುರಾಡಳಿತ ಹಾಗೂ ನರೇಂದ್ರ ಮೋದಿಯ ಸುಳ್ಳಿನ ಆಶ್ವಾಸನೆಗೆ ಮತ್ತೊಂದು ಸುಳ್ಳು ಸಾಕ್ಷಿಯಾಗಿದೆ, ಕರ್ನಾಟಕ ರಾಜ್ಯದ ಬಿಜೆಪಿ ನಾಯಕರು ಕಾಂಗ್ರೆಸ್ ಸರ್ಕಾರದ ಜನಪ್ರಿಯತೆಯನ್ನು ಸಹಿಸದೆ ಸುಳ್ಳು ಆರೋಪಗಳನ್ನು ಮಾಡಿ ಪ್ರತಿಭಟನೆ ಮಾಡುತ್ತಿದೆ ಆದರೆ ಬಿಜೆಪಿಯ ಭೂಗಳ್ಳರು ಸರ್ಕಾರಿ ಜಮೀನನ್ನು ನುಂಗಿ ಇಂದು ಆಧಾರ ರಹಿತ ಆರೋಪ ಮಾಡುತ್ತಿರುವುದು ಅತ್ಯಂತ ಅಪಹಾಸ್ಯವಾಗಿದೆ, ಬಿಜೆಪಿ ನಾಯಕರಿಗೆ ನೈತಿಕತೆ ಇದ್ದರೆ ಯಾವ ವಿಷಯದ ಬಗ್ಗೆ ಹೋರಾಟ ನಡೆಸುತ್ತಿದ್ದೇವೆ ಎಂಬ ಪರಿಜ್ಞಾನವೂ ಇಲ್ಲ ಬಿಜೆಪಿ ಆಡಳಿತದಲ್ಲಿ ನಡೆದ ಅಕ್ರಮವನ್ನು ಬಿಜೆಪಿ ಪಕ್ಷದವರೇ ಇಂದು ಹೊರತರುತ್ತಿರುವುದು ಬಿಜೆಪಿಯ ಭ್ರಷ್ಟಾಚಾರಕ್ಕೆ ಮತ್ತೊಂದು ಸಾಕ್ಷಿಯಾಗಿದೆ, ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ರವರು ಸತ್ಯ ಹರಿಶ್ಚಂದ್ರನ ರೀತಿ ಹೇಳಿಕೆ ನೀಡುತ್ತಿದ್ದಾರೆ. ಬಳ್ಳಾರಿಯ ದೇವದಾರಿ ಗಣಿಗಾರಿಕೆಗೆ ಅವಕಾಶ ನೀಡಿ ರಾಜ್ಯದ ಖನಿಜ ಸಂಪತ್ತನ್ನು ಲೂಟಿ ಮಾಡಲು ಮುಂದಾಗಿರುವ ಕುಮಾರಸ್ವಾಮಿ ರವರು ಮಾನ್ಯ ಮುಖ್ಯಮಂತ್ರಿಗಳ ವಿರುದ್ಧ ಮೂಡ ವಿಷಯದ ಬಗ್ಗೆ ಮಾಡಿರುವ ಟೀಕೆ ಬಿಜೆಪಿಯವರ ಭ್ರಷ್ಟಾಚಾರವನ್ನು ಬೆಂಬಲಿಸಿರುವುದು ಸಾಬೀತಾಗಿದೆ, ಪ್ರಸ್ತುತ ಹೋರಾಟ ನಡೆಸುತ್ತಿರುವ ಬಿಜೆಪಿ ನಾಯಕರು ಅಕ್ರಮ ಭೂಕಬಳಿಕೆ ಆರೋಪವನ್ನು ಹೊತ್ತಿ ಈಗಾಗಲೇ ಆರೋಪ ಸ್ಥಾನದಲ್ಲಿ ನಿಂತಿರುವವರು ಈಗ ಪ್ರಾಮಾಣಿಕರಂತೆ ಹೋರಾಟ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು. ಈ ಪ್ರತಿಭಟನೆಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾದ ಎಸ್. ಮನೋಹರ್, ಮುಖಂಡರುಗಳಾದ ಸುಧಾಕರ್, ಪ್ರಕಾಶ್, ಚೇತನ್, ರಂಜಿತ್, ಚಂದ್ರಶೇಖರ, ಪುಟ್ಟರಾಜು, ಹಾಗೂ ಕಾಂಗ್ರೆಸ್ ಕಾರ್ಯಕರ್ತರ ಭಾಗವಹಿಸಿದ್ದರು.

# ಆನ್‌ಲೈನ್ ವಂಚನೆಗೆ ಮೋಸ ಹೋಗದೆ ಜಾಗೃತರಾಗಿರಿ: ಅಣ್ಣಿಗೇರಿ



ವಿಜಯಪುರ,ಜು.7:

ದೇಶದಲ್ಲಿ ಸೈಬರ್ ಕ್ರೈಂ, ಆನಲೈನ್ ವಂಚನೆ, ಸುಳ್ಳು ಸಂದೇಶ ಕಳಿಸಿ ಜನತೆಗೆ ಮೋಸ ಮಾಡುವ ದೊಡ್ಡ ಜಾಲವಿದ್ದು, ಇಂತಹ ನಯವಂಚಕರಿಂದ ಜಾಗೃತಿ ಮೂಡಿಸುವದಕ್ಕಾಗಿಯೇ ವಿಜಯಪುರ ನಗರ ಶಾಸಕರು ಹಾಗೂ ಸಿದ್ಧಸಿರಿ ಸೌಹಾರ್ದ ಸಹಕಾರಿ ಸಂಘ ನಿ. ಅಧ್ಯಕ್ಷ ಬಸನಗೌಡ ಪಾಟೀಲ ಯತ್ನಾಳ ಅವರ ನಿರ್ದೇಶನದಂತೆ ರಾಜ್ಯಾದ್ಯಂತ ಸಿದ್ಧಸಿರಿ ಸೌಹಾರ್ದ ಸಹಕಾರಿಯು ಗ್ರಾಹಕರ ಸಭೆ ಮೂಲಕ ಗ್ರಾಹಕರಲ್ಲಿ ಜಾಗೃತಿ ಮೂಡಿಸುವ ಮಹತ್ಕಾರ್ಯ ಮಾಡುತ್ತಿದೆ ಎಂದು ಸಿದ್ಧಸಿರಿ ಸೌಹಾರ್ದ ಸಹಕಾರಿ ಸಂಘ ನಿ. ಜಂಟಿ ವ್ಯವಸ್ಥಾಪಕ ನಿರ್ದೇಶಕ ರಾಘವ ಅಣ್ಣಿಗೇರಿ ತಿಳಿಸಿದರು. ಸಿಂದಗಿ ಪಟ್ಟಣದ ಸಿದ್ಧಸಿರಿ ಸೌಹಾರ್ದ ಸಹಕಾರಿ ಸಂಘ ನಿ. ಶಾಖೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಗ್ರಾಹಕರ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಸಿದ್ಧಸಿರಿ ಸೌಹಾರ್ದ ಸಹಕಾರಿ ಸಂಘ ನಿ. ಸಿದ್ಧಸಿರಿಯ ಠೇವಣಿ ರೂ. 3,500 ಕೋಟಿ, ಸಾಲ ಹಾಗೂ ಮುಂಗಡಗಳು ರೂ. 2,400 ಕೋಟಿ, ಶೇರು ಸಂಗ್ರಹ ರೂ.55 ಕೋಟಿ, ದುಡಿಯುವ ಬಂಡವಾಳ ರೂ. 3,600 ಕೋಟಿ ಹೊಂದಿದ್ದು, ರಾಜ್ಯಾದ್ಯಂತ 159 ಶಾಖೆಗಳು, 1080 ಸಿಬ್ಬಂದಿಗಳು, 593 ಪಿಗ್ಮಿ ಸಂಗ್ರಹಕಾರರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು. ಯಾವುದೇ ಬ್ಯಾಂಕ್, ಸೊಸೈಟಿಗಳು, ಸೌಹಾರ್ದಗಳಲ್ಲಿ ಖಾತೆ ಹೊಂದಿರುವ ಗ್ರಾಹಕರು ತಪ್ಪದೆ ಪ್ರತಿ ವ್ಯವಹಾರದ ಬಳಿಕ ಪಾಸಬುದಲ್ಲಿ ಮುದ್ರಿಸಿಕೊಳ್ಳಬೇಕು. ಸಿಬ್ಬಂದಿ ಮುದ್ರಿಸಲು ನಿರಾಕರಿಸಿದರೆ, ತಕ್ಷಣ ಹಿರಿಯ ಅಧಿಕಾರಿಗಳಿಗೆ ದೂರು ನೀಡಬೇಕು. ಪ್ರತಿ ವ್ಯವಹಾರದ ಸಂದೇಶ ಮೊಬೈಲ್ ಬರುವಂತೆ ನೋಡಿಕೊಳ್ಳಬೇಕು. ಠೇವಣಿ ತುಂಬಿದ ತಕ್ಷಣ ಠೇವಣಿ ಪತ್ರ, ರಸೀದಿ ಪಡೆಯಬೇಕು. ಪಿಗ್ಮಿ ಹಣದ ಬಗ್ಗೆಯೂ ಖಚಿತಪಡಿಸಿಕೊಳ್ಳಿ. ಖಾಲಿ ಚೆಕ್, ವಿತ್ ಡ್ರಾ ರಸೀದಿಗಳಲ್ಲಿ ಸಹಿ ಮಾಡಿ ನೀಡಬಾರದು ಎಂದು ಸಲಹೆ ನೀಡಿದರು. ವಂಚಕರಿಂದ ಆರ್‌ಬಿಐ, ಐಟಿ ಇಲಾಖೆ, ಪೊಲೀಸ್ ಇಲಾಖೆ, ಏರಪೋರ್ಟ ಕಸ್ಟಮ್ ಕಚೇರಿ, ಪಾರ್ಸಲ್ ಆಫೀಸ್ ಎಂದು ಹೇಳಿಕೊಂಡು ಕರೆ ಅಥವಾ ತಮ್ಮ ಮೊಬೈಲ್ ನಂಬರ್ ಲಾಟರಿ ಸ್ಕೀನ್ ವಂಚನೆಗೆ ಮೋಸ ಹೋಗದೆ ಜಾಗೃತರಾಗಿರಿ: ಅಣ್ಣಿಗೇರಿನಲ್ಲಿ ಆಯ್ಕೆಯಾಗಿದೆ ಎಂದು, ತಮಗೆ ಲಾಟರಿ ಹತ್ತಿದೆ ಎಂದು ಸುಳ್ಳು ಹೇಳಿ ಮುಗ್ಧ ಜನತೆಯನ್ನು ವಂಚಿಸುವ ಪ್ರಕರಣಗಳು ಬೆಳಕಿಗೆ ಬಂದಿವೆ. ಇಂತಹ ಯಾವುದೇ ಕರೆಗಳಿಗೆ, ವ್ಯಕ್ತಿಗಳಿಗೆ ಕಿವಿಗೊಡದೆ ಜಾಗ್ರತರಾಗಿರಬೇಕು. ಓಟಿಪಿ ಸಂಖ್ಯೆ ಯಾವುದೇ ಕಾರಣಕ್ಕೂ ಶೇರ್ ಮಾಡಬೇಡಿ ಎಂದು ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ಸಿದ್ಧಸಿರಿ ಮಹಾ ಪ್ರಬಂಧಕಿ ಉಮಾದೇವಿ ಹಿರೇಮಠ, ವಕೀಲರ ಸಂಘದ ಅಧ್ಯಕ್ಷ ಎಸ್.ಬಿ. ಪಾಟೀಲ, ವೆಂಕಟೇಶ ಗುತ್ತೇದಾರ, ಶಫಿ ಅಹಮದ್ ಬಿಜಾಪುರ, ಮುಖ್ಯೋಪಾಧ್ಯಾಯರಾದ ರತ್ನಾಬಾಯಿ ನಾಗಾವಿ, ಜಗದೇವಿ ನಂದಿಕೋಲ, ರವಿ ಪಾಟೀಲ, ಸಿದ್ದನಗೌಡ ಬೋರಾವತ, ಧರೆಪ್ಪ ಬಿರಾದಾರ, ಸಂದೀಪ ಗುಡೂರ, ಯೋಗೇಶ ಹಳ್ಳಿ, ಪವನ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

# ಶೀಘ್ರ ಫಲಾನುಭವಿಗಳಿಗೆ ಗ್ಯಾರಂಟಿ ಹಣ



ಬಳ್ಳಾರಿ:–

ಸದ್ಯದಲ್ಲೇ ಕಳೆದ ಜೂನ್ ತಿಂಗಳ ಗೃಹ ಲಕ್ಷ್ಮಿ ಯೋಜನೆಯ ಹಣ ಬರಲಿದೆ. ಆಗಲೇ ಡಿಬಿಟಿ ಮಾಡಲು ಹಣ ಮಂಜೂರು ಮಾಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಅವರು ಇಂದು ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುತ್ತ. ಈ ಯೋಜನೆಗೆ ಕಳೆದ ಮೇ ತಿಂಗಳು ಆರಂಭದಲ್ಲೇ ಹಣ ನೀಡಿತ್ತು ಈಗ ಒಂದು ತಿಂಗಳದ್ದು ಬಾಕಿ ಇದೆ. ಸದ್ಯದಲ್ಲೇ ಅವರವರ ಖಾತೆಗಳಿಗೆ ಹಣ ಸಂದಾಯವಾಗಲಿ ಎಂದು ಹೇಳಿದರು. ಅಂಗನವಾಡಿ ಕೇಂದ್ರಗಳಿಗೆ ಮೊಟ್ಟೆ ವಿತರಣೆ ಹಣ ಸರ್ಕಾರ ನೀಡಲು ವಿಳಂಬವಾಗುವುದಕ್ಕೆ ನಾನಾ ಕಾರಣಗಳಿವೆ. ಈ ಕುರಿತು ಹಣಕಾಸು ಇಲಾಖೆಯೊಂದಿಗೆ ಮಾತುಕತೆ ಮಾಡಿ ವಿಭಾಗವಾರು ಯಾವುದೇ ಆರೋಪಗಳು ಕೇಳಿಬರದಂತೆ ಟೆಂಡರ್ ಕರೆಯಲಾಗಿದೆ. ಸಧ್ಯದಲ್ಲೇ ಅಂಗನವಾಡಿಗಳಿಗೆ ಮೊಟ್ಟೆ ಸರಬರಾಜು ಆಗಲಿದೆಂದರು. ನಾನು ಪಕ್ಷದ ಶಿಸ್ತಿನ ಸಿಪಾಯಿ. ಪಕ್ಷ, ಹೈಕಮಾಂಡ್ ಏನು ಹೇಳುತ್ತೆ ಅದನ್ನು ಕೇಳುವೆ ಎಂದರು. ಅಂಗನವಾಡಿ ಹೆಸರು ಬದಲಾವಣೆ ಬಗ್ಗೆ ನಿರ್ಧರಿಸಿದೆ. ಈ ಬಗ್ಗೆ ಚರ್ಚೆ ನಡೆದಿದೆ. ಸರಿಯಾದ ನಿರ್ಧಾರ ತೆಗೆದುಕೊಳ್ಳಲಿದೆಂದ ಅವರು ಅಂಗನವಾಡಿ ಕೇಂದ್ರಗಳಲ್ಲಿಎಲ್‌ಕೆಜ ಯುಕೆಜಿ ಆರಂಭಿಸುವ ಬಗ್ಗೆ ಸಿಎಂ ಅವರ ಜೊತೆ ಮಾತನಾಡಿರುವೆ. ಪದವಿ, ಸ್ನಾತಕೋತ್ತರ ಪದವಿ ಪಡೆದವರು ಅಂಗನವಾಡಿ ಕಾರ್ಯಕರ್ತರಿದ್ದಾರೆ. ಅವರು ಮಕ್ಕಳಿಗೆ ಆಂಗ್ಲ ಭಾಷೆ ಭೋದಿಸಲು ಸಮರ್ಥರಿದ್ದಾರೆ ಎಂಬುದನ್ನು ಸಿಎಂ ಗಮನಕ್ಕೆ ತಂದಿದೆ.ಈ ಬಗ್ಗೆ ಶಿಕ್ಷಣ ಇಲಾಖೆ, ನಮ್ಮ ಇಲಾಖೆ ಚರ್ಚೆ ನಡೆಸಿದೆ. ಗುಣಮಟ್ಟದ ಶಿಕ್ಷಣ, ಸದೃಢ ಮಕ್ಕಳನ್ನು ನಿರ್ಮಿಸುವುದೇ ನಮ್ಮ ಗುರಿಯಾಗಿದೆ. ಯಾವುದೇ ಕಾರಣಕ್ಕೆ ಅಂಗನವಾಡಿಗಳನ್ನು ಮುಚ್ಚುವುದಿಲ್ಲ ಎಂದರು. ಎಸ್ಸಿ, ಎಸ್ಟಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಕುರಿತ ಬಿಜೆಪಿಯವರ ಆಕ್ಷೇಪಕ್ಕೆ ಉತ್ತರಿಸಿ. ಗ್ಯಾರೆಂಟಿ ಯೋಜನೆಗಳಲ್ಲೂ ಎಸ್ಸಿ ಎಸ್ಟಿ ಜನರಿದ್ದಾರೆ.

ಅವರಿಗೆ ಈ ಅನುದಾನ ಬಳಕೆಯಾಗುತ್ತೆ ಎಂದ ಅವರು. ಬಿಜೆಪಿಯವರ ಪ್ರತಿಯೊಂದು ಆರೋಪಕ್ಕೆ ಉತ್ತರ ಕೊಡಲು ಆಗಲ್ಲ. ಅವರ ಅವಧಿಯಲ್ಲಿ ಎಸ್ಸಿ, ಎಸ್ಟಿ ಸಮುದಾಯ ಅಭಿವೃದ್ಧಿಗೆ ಎಷ್ಟು ಅನುದಾನ ಮೀಸಲಿಟ್ಟಿದ್ದಾರೆ ಎಂಬುವುದನ್ನು ತಿಳಿಸಲಿ ಎಂದರು. ಮುಡಾ ಅಕ್ರಮ ಬಗ್ಗೆ ನನಗೆ ಗೊತ್ತಿಲ್ಲ. ಜಿಲ್ಲೆಯಲ್ಲಿ ಸತೀಶ್ ಜಾರಕಿಹೊಳಿ, ಲಕ್ಷ್ಮಣ ಸವದಿ ಅವರು ಹಿರಿಯ ನಾಯಕರಾಗಿದ್ದು, ಎಲ್ಲರೂ ಒಗ್ಗಟ್ಟಾಗಿದ್ದೇವೆ. ಈಗಾಗಲೇ ಅವರೊಂದಿಗೆ ಮಾತನಾಡಲಾಗಿದೆ. ಏನೆ ಸಮಸ್ಯೆ ಇದ್ದರೂ ಪಕ್ಷದ ಚೌಕಟ್ಟಿನಲ್ಲಿ ಕುಳಿತು ಬಗೆಹರಿಸಿಕೊಳ್ಳುತ್ತೇವೆ ಎಂದರು.

# ಬಾಲಿವುಡ್ ನಲ್ಲಿ ರಶ್ಮಿಕಾ ಭಾರೀ ಬೇಡಿಕೆ

ಹೈದರಾಬಾದ್:–

ಕನ್ನಡದ ನಟಿ ರಶ್ಮಿಕಾ ಮಂದಣ್ಣ ತೆಲುಗಿನಲ್ಲಿ ಸ್ಟಾರ್ ಹೀರೋಯಿನ್. ಬಾಲಿವುಡ್ ನಲ್ಲಿ ತನ್ನದೇ ಛಾಪು ಮೂಡಿಸಿರುವ ನಟಿ ರಶ್ಮಿಕಾ ಮಂದಣ್ಣಗೆ ಸಿಕ್ಕಾಪಟ್ಟೆ ಡಿಮ್ಯಾಂಡ್ ಕೂಡ ಕ್ರಿಯೇಟ್ ಆಗಿದೆ. ನಟಿ ರಶ್ಮಿಕಾ ಸರಣಿ ಸಿನಿಮಾಗಳಲ್ಲಿ ತೊಡಗಿಸಿಕೊಂಡಿದ್ದಾರೆ. ರಶ್ಮಿಕಾ ಮಂದಣ್ಣ ಅಭಿನಯದ ಸಿನಿಮಾಗಳು ಬಾಕ್ಸ್ ಆಫೀಸ್ ನಲ್ಲಿ ಸೂಪರ್ ಹಿಟ್ ಆಗುತ್ತಿದ್ದಂತೆ ನಟಿಗೆ ಬೇಡಿಕೆ ಹೆಚ್ಚಿದೆ. ಸ್ಟಾರ್ ನಟರ ಸಿನಿಮಾಗಳಿಗೆ ನಟಿ ರಶ್ಮಿಕಾ ಮೊದಲ ಆಯ್ಕೆ. ರಶ್ಮಿಕಾ ಮಂದಣ್ಣ ಅವರ ಮುಂಬರುವ ಸಿನಿಮಾಗಳ ಪಟ್ಟಿಯೂ ಬಹಳ ದೊಡ್ಡದಿದೆ. ರಶ್ಮಿಕಾ ಬಾಲಿವುಡ್‌ನಲ್ಲಿ ನಿತಿನ್ ಜೊತೆ ತೆಲುಗಿನಲ್ಲಿ ಅಲ್ಲು ಅರ್ಜುನ್ ಅಭಿನಯದ ಪುಷ್ಪ 2, ಶಾಹಿದ್ ಕಪೂರ್ ಮತ್ತು ವಿಕ್ಕಿ ಕೌಶಲ್ ಜೊತೆಗಿನ ಹಿಂದಿ ಚಿತ್ರಗಳೊಂದಿಗೆ ಬ್ಯುಸಿಯಾಗಿದ್ದಾರೆ. ರಶ್ಮಿಕಾ ಇತ್ತೀಚೆಗೆ ಮತ್ತೊಂದು ಚಿತ್ರಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರಂತೆ. ಮೆಗಾಸ್ಟಾರ್ ಚಿರಂಜೀವಿ ಅಭಿನಯದ ವಿಶ್ವಂಭರ ಚಿತ್ರದಲ್ಲಿ ರಶ್ಮಿಕಾ ಕಾಣಿಸಿಕೊಳ್ಳಲಿದ್ದಾರೆ ಎಂದು ವರದಿಯಾಗಿದೆ. ಆದರೆ ಈ ಸಿನಿಮಾದಲ್ಲಿ ಈಗಾಗಲೇ ತ್ರಿಷಾ ನಾಯಕಿಯಾಗಿ ಆಯ್ಕೆಯಾಗಿದ್ದಾರೆ. ರಾಷ್ಟ್ರೀಯ ಖ್ಯಾತಿಯ ರಶ್ಮಿಕಾ ಅವರನ್ನು ವಿಶೇಷ ಪಾತ್ರಕ್ಕಾಗಿ ನಿರ್ದೇಶಕ ಮತ್ತು ನಿರ್ಮಾಪಕರು ಸಂಪರ್ಕಿಸಿದ್ದಾರೆ ಎಂದು ವರದಿಯಾಗಿದೆ. ಅದೂ ಅಲ್ಲದೆ ಸ್ವತಃ ಮೆಗಾಸ್ಟಾರ್ ಚಿರಂಜೀವಿ ಅವರೇ ರಶ್ಮಿಕಾ ಅವರ ಹೆಸರನ್ನು ಚಿತ್ರದ ಪಾತ್ರಕ್ಕೆ ಸೂಚಿಸಿರುವುದು ವಿಶೇಷ. ಚಿರಂಜೀವಿ ಅವರ ಸಲಹೆಯಂತೆ ಚಿತ್ರತಂಡ ನಟಿ ರಶ್ಮಿಕಾ ಮಂದಣ್ಣ ಅವರನ್ನು ಭೇಟಿಯಾಗಿ ಚರ್ಚಿಸಿದೆ. ಈ ಚಿತ್ರದಲ್ಲಿ ಮೆಗಾಸ್ಟಾರ್ ಚಿರಂಜೀವಿ ಜೊತೆಗೆ ರಶ್ಮಿಕಾ ಮತ್ತು ಮೆಗಾ ಪವರ್ ಸ್ಟಾರ್ ರಾಮ್ ಚರಣ್ ಕೂಡ ನಟಿಸಲಿದ್ದಾರೆ ಎನ್ನಲಾಗಿದೆ. ಬುಚ್ಚಿಬಾಬು ಮತ್ತು ರಾಮ್ ಚರಣ್ ಅವರ ಮುಂದಿನ ಚಿತ್ರಕ್ಕೆ ರಶ್ಮಿಕಾ ನಾಯಕಿಯಾಗಿ ಆಯ್ಕೆಯಾಗಿದ್ದು, ಶೀಘ್ರದಲ್ಲೇ ಅಧಿಕೃತ ಘೋಷಣೆ ಮಾಡಲಾಗುವುದು ಎಂದು ಹೇಳಲಾಗಿದೆ. ಪುಷ್ಪ–2, ವಿಶ್ವಂಭರ, ರಾಮ್ ಚರಣ್ ಅವರ ಹೊಸ ಸಿನಿಮಾಗಳಲ್ಲಿ ನಟಿಸುವ ಮೂಲಕ ರಶ್ಮಿಕಾ 'ಮೆಗಾ ಹೀರೋಯಿನ್' ಆಗಿ ಬದಲಾಗಿದ್ದಾರೆ ಎಂದು ನೆಟ್ಟಿಗರು ಕಾಮೆಂಟ್ ಮಾಡುತ್ತಿದ್ದಾರೆ.

Printed by: SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Publised by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Owned by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Printed At :SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Editor :S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.